MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 47 | ಶುಕ್ರವಾರ :05-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 47 | FRIDAY : 05-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸಂಪುಟ ಸಭೆಯಲ್ಲಿ ವಿವಾದಿತ ಕಾನೂನುಗಳ ಕುರಿತು ಚರ್ಚೆ



**ಬೆಂಗಳೂರು, ಡಿ.4–** ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ಕಾಯ್ದೆ, ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ತಿದ್ದುಪಡಿ ಕಾಯ್ದೆ, ಕರ್ನಾಟಕ ಸಾಮಾಜಿಕ ಬಹಿಷ್ಕಾರ ನಿಷೇಧ ಮತ್ತು ಪರಿಹಾರ ಕುರಿತ ಕಾನೂನುಗಳ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ಚರ್ಚೆಗಳಾಗಿವೆ.

ಇದೇ ತಿಂಗಳ 8 ರಿಂದ ಬೆಳಗಾವಿಯಲ್ಲಿ ಆರಂಭವಾಗುವ ಚಳಿಗಾಲದ ಅಧಿವೇಶನದಲ್ಲಿ ವಿವಾದಿತ ಮಸೂದೆಗಳನ್ನು ಮಂಡಿಸಲು ತಯಾರಿಯಾಗಿದ್ದು, ಇಂದು ಸಂಪುಟದಲ್ಲಿ ಮಹತ್ವ ಚರ್ಚೆಗಳಾಗಿದೆ.ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಬಗ್ಗೆ ಕಠಿಣ ಕಾನೂನು ರೂಪಿಸಲಾಗಿದ್ದು, ಇದು ಬಹಳಷ್ಟು ಹಿಂದೂ ಸಂಘಟನೆಗಳು ಹಾಗೂ ಬಿಜೆಪಿ ಬೆಂಬಲಿತ ಪ್ರಮುಖರಿಗೆ ಮುಳುವಾಗುವ ಸಾಧ್ಯತೆ ಇದೆ. ಈ ಕಾಯ್ದೆಯ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆಗಳು ಭುಗಿಲೇಳುವ ನಿರೀಕ್ಷೆ ಇದೆ. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿ ವಿಧೇಯಕ, ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ತಿದ್ದುಪಡಿ ವಿಧೇಯಕಗಳ ಬಗ್ಗೆಯೂ ಚರ್ಚೆಯಾಗಿದೆ. ವಿಧಾನ ಮಂಡಲದಲ್ಲಿ ಮಂಡನೆಗೆ ಈ ವಿಧೇಯಕಗಳನ್ನು ಅಂಗೀಕರಿಸುವ ಸಾಧ್ಯತೆ ಇದೆ.

ಜಾನುವಾರುಗಳನ್ನು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ತಿದ್ದುಪಡಿ ವಿಧೇಯಕ ಮತ್ತೊಂದು ವಿವಾದ ಸೃಷ್ಟಿಸುವ ಅಂದಾಜುಗಳಿವೆ. ಈ ಹಿಂದೆ ಬಿಜೆಪಿ ಸರ್ಕಾರ ಗೋ ಹತ್ಯೆಗೆ ಕಡಿವಾಣ ಹಾಕಲು ಕಠಿಣ ಕಾನೂನನ್ನು ರೂಪಿಸಿತ್ತು. ಆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಲ್ಲದೆ, ಅಧಿಕಾರಕ್ಕೆ ಬಂದರೆ ಕಾನೂನನ್ನು ಸರಳೀಕರಣಗೊಳಿಸುವುದಾಗಿ ಪ್ರಣಾಳಿಕೆಯಲ್ಲಿ ಭರವಸೆ ನೀಡಿತ್ತು. ಅದರಂತೆ ಗೋ ಹತ್ಯೆ ಕ್ರಿಮಿನಲ್ ಅಪರಾಧವಾಗಿರುವುದನ್ನು ಸರಳೀಕರಣಗೊಳಿಸಲು ಸಂಪುಟದಲ್ಲಿ ಚರ್ಚಿಸಲಾಗಿದೆ.

ಬಿಜೆಪಿಯ ಮಹತ್ವಾಕಾಂಕ್ಷೆಯ ಈ ವಿಧೇಯಕಕ್ಕೆ ಕಾಂಗ್ರೆಸ್ **(2ನೇಪುಟಕ್ಕೆ)**

## ಪೌರ ನೌಕರರ ಬೇಡಿಕೆಗಳ ಈಡೇರಿಕೆಗೆ ಅಧಿವೇಶನದಲ್ಲಿ ಧ್ವನಿ ಎತ್ತಿ



ಯುವಮಾರ್ಗ ಸುದ್ದಿ

**ಲಿಂಗಸುಗೂರು,ಡಿ.4–** ರಾಜ್ಯಾದ್ಯಂತ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರ ನೌಕರರ ಬೇಡಿಕೆಗಳನ್ನು ಈಡೇರಿಸಲು ಶಾಸಕರು ಬೆಳಗಾವಿ ಅಧಿವೇಶನದಲ್ಲಿ ಧ್ವನಿಯಾಗಿ ನಮಗೆ ನ್ಯಾಯ ದೊರಕಿಸಿ ಎಂದು ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಪದಾಧಿಕಾರಿಗಳು ಶಾಸಕ ಮಾನಪ್ಪ ವಜ್ಜಲ್ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ರಾಜ್ಯ ಸರಕಾರಿ ನೌಕರರಿಗೆ ನೀಡುವ ಸವಲತ್ತುಗಳನ್ನು ಪೌರಸೇವಾ ನೌಕರರಿಗೂ ವಿಸ್ತರಿಸಬೇಕು. ರಾಜ್ಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿನಗೂಲಿ, ಕ್ಷೇಮಾಭಿವೃದ್ಧಿ ಅಧಿನಿಯಮದಡಿ ಇರುವ ನೌಕರರನ್ನು ಸಕ್ಷಮಾತಿಗೊಳಿಸಬೇಕು. 2022ನೇ ಸಾಲಿನ ವಿಶೇಷ ನೇಮಕಾತಿಯಡಿ ಆಯ್ಕೆಯಾದ ಪೌರ ಕಾರ್ಮಿಕರು, ಲೋಡರ್ಸ್‌ಗಳಿಗೆ ಎಸ್‌ಎಫ್‌ಸಿ ವೇತನ ನಿಧಿಯಿಂದ ವೇತನ ಪಾವತಿಸಬೇಕು. ರಾಜ್ಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೀರು ಸರಬರಾಜು ನೌಕರರನ್ನು ವಿಶೇಷ ನೇಮಕಾತಿಯಡಿ ಪರಿಗಣಿಸಬೇಕು. ಪೌರ ಸೇವಾ ನೌಕರರಿಗೆ ಜ್ಯೋತಿ ಸಂಜೀವಿನಿ, ನಗದು ರಹಿತ ಚಿಕಿತ್ಸಾ ಸವಲತ್ತು ಕಲ್ಪಿಸಬೇಕು. ಐಟಿ : ಐಟಿ ಸಿಬ್ಬಂಧಿ, ಅಕೌಂಟ್ ಕನ್ಸಲ್ಟಂಟಂಟ್, ಕಂಪ್ಯೂಟರ್ ಆಪರೇಟರ್, ವಾಹನ ಚಾಲಕ, ಸ್ಯಾನಿಟರಿ ಸುಪರ್‌ವೈಸರ್ ಹಾಗೂ ಇತರೆ ವೃಂದದ ನೌಕರರನ್ನು ಪೌರಸೇವಾ ನೌಕರರೆಂದು ಪರಿಗಣಿಸಿ ವಿಲೀನಗೊಳಿಸಬೇಕು ಸೇರಿ ಇತರೆ ಬೇಡಿಕೆಗಳ ಬಗ್ಗೆ ಅಧಿವೇಶದಲ್ಲಿ ಧ್ವನಿ ಎತ್ತಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಶಿವಲಿಂಗ ಮೇಗಳಮನಿ, ಗೌರವಾಧ್ಯಕ್ಷ ಹನುಮಂತ ನಾಯಕ, ಉಪಾಧ್ಯಕ್ಷೆ ದುರುಗಮ್ಮ, ಪ್ರಧಾನ ಕಾರ್ಯದರ್ಶಿ ಮಂಜುನಾಥ ಟಿ., ಸಹಕಾರ್ಯದರ್ಶಿ ಕುಬೇರಪ್ಪ, ಜಂಟಿ ಕಾರ್ಯದರ್ಶಿ ವಿರೇಶ, ಖಜಾಂಚಿ ರಾಜಗೋಪಾಲ, ಕಾನೂನು ಸಲಹೆಗಾರ ಮಲ್ಲೇಶ, ಭಾಗ್ಯಜ್ಯೋತಿ, ಜಿಲ್ಲಾ ನಿರ್ದೇಶಕ ಶಹನವಾಜ್, ವಿಶೇಷ ಪ್ರತಿನಿಧಿಗಳಾದ ಗದ್ದೆಪ್ಪ ಮಾನಪ್ಪ ಐದನಾಳ, ಆನಂದ, ಕುಪ್ಪಣ್ಣ, ಶರಣಪ್ಪ ಸೇರಿದಂತೆ ಇದ್ದರು.

## ಬಡತನ ಶೈಕ್ಷಣಿಕ ಸಾಧನೆಗೆ ಅಡ್ಡಿಯಾಗದು: ಡಿವೈಎಸ್ಪಿ ವೆಂಕಟೇಶ ಹೊಗಿಬಂಡಿ

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.4–** ವಿದ್ಯಾರ್ಥಿಗಳ ನಿರಂತರ ಅಭ್ಯಾಸ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿದ್ದು, ಸಾಧನೆಯ ಛಲವಿದ್ದರೆ ಬಡತನ ಅಡ್ಡಿಯಾಗುವದಿಲ್ಲ ಎಂದು ರಾಯಚೂರು ಜಿಲ್ಲಾ ಸೈಬರ್ ಕ್ರೈಮ್ ವಿಭಾಗದ ಡಿವೈಎಸ್ಪಿ ವೆಂಕಟೇಶ್ ಹೊಗಿಬಂಡಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿರು.

ಪಟ್ಟಣದ ಬಾಲಕರ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ತಿಂಗಳ ಅತಿಥಿ ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್ಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಜೀವನದಲ್ಲಿ ನಿರಂತರ ಅಭ್ಯಾಸ, ಅಧ್ಯಾಯವನ್ನು ರೂಢಿಸಿಕೊಳ್ಳಬೇಕಿದೆ. ಎಲ್ಲಾ ವಿಷಯಗಳ ಓದಿನ ಬಗ್ಗೆ ಆಸಕ್ತಿಯನ್ನು ಬೆಳೆಸಿಕೊಂಡಾಗ ಮಾತ್ರ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಗಳಿಸಲು**(2ನೇಪುಟಕ್ಕೆ)**

## ನೂತನ ಬಡಾವಣೆ ನಿರ್ಮಾಣಕ್ಕೆ ಸರ್ಕಾರ ಬದ್ಧ: ನಗರಾಭಿವೃದ್ಧಿ ಇಲಾಖೆ ಸಚಿವ ಬೈರತಿ ಸುರೇಶ್ ಭರವಸೆ

ಯುವಮಾರ್ಗ ಸುದ್ದಿ



**ರಾಯಚೂರು,ಡಿ.4–**ರಾಯಚೂರು ನಗರದಲ್ಲಿ ಬಹುನಿರೀಕ್ಷಿತ ನೂತನ ಸಿದ್ದರಾಮೇಶ್ವರ ಬಡಾವಣೆ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ಬದ್ಧವಾಗಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬೈರತಿ ಸುರೇಶ್ ತಿಳಿಸಿದರು.

ರಾಯಚೂರು ಜಿಲ್ಲಾಧಿಕಾರಿ ಸಭಾಂಗಣದಲ್ಲಿ ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ಪ್ರಗತಿ ಪರಿಶೀಲನೆ ನಡೆಸಿದ ಬಳಿಕ ಅವರು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು.

ನಗರಾಭಿವೃದ್ಧಿ ಪ್ರಾಧಿಕಾರದಿಂದ ರಾಯಚೂರು ನಗರದ ಹೊರವಲಯದಲ್ಲಿ ಸಿದ್ದರಾಮೇಶ್ವರ ಬಡಾವಣೆಯನ್ನು ನಿರ್ಮಾಣ ಮಾಡಲು ರಾಜ್ಯ ಸರ್ಕಾರ ಬದ್ಧವಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಕಡತವನ್ನು ಕೇಂದ್ರ ಕಚೇರಿಗೆ ಕಳುಹಿಸಿದರೆ ಕೂಡಲೇ ಅನುಮೋದನೆ ನೀಡಲಾಗುತ್ತದೆ ಎಂದು ಸಚಿವರು ತಿಳಿಸಿದರು.

**ಶೌಚಾಲಯ ನಿರ್ಮಾಣಕ್ಕೆ ಆದ್ಯತೆ:** 15ನೇ ಹಣಕಾಸು ಆಯೋಗ ನಿಗದಿಪಡಿಸಿರುವ ಎಲ್ಲಾ ಹಣವನ್ನು ಸಾರ್ವಜನಿಕ ಕಾಮಗಾರಿಗಳ ಅನುಷ್ಠಾನಕ್ಕೆ ವ್ಯಯಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಮನೆಗಳಲ್ಲಿ, ಪ್ರತಿಯೊಬ್ಬರು ಶೌಚಾಲಯಗಳನ್ನು ನಿರ್ಮಿಸುವುದಕ್ಕೆ ಸಾರ್ವಜನಿಕರಿಗೆ ಉತ್ತೇಜನ ನೀಡಬೇಕು ಮತ್ತು ಹೆಚ್ಚು ಕೊಳಚೆ ಪ್ರದೇಶಗಳಿರುವ ಕಡೆ ಸಮುದಾಯ ಶೌಚಾಲಯಗಳನ್ನು ನಿರ್ಮಾಣ ಮಾಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ.

ಎಲ್ಲಾ ವರ್ಗದ ಜನರಿಗೆ ಅದರಲ್ಲೂ ಕೊಳಗೇರಿ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡಬೇಕು. ನಗರದಲ್ಲಿ ವರ್ತುಲ ರಸ್ತೆ ನಿರ್ಮಾಣಕ್ಕೆ ರೂಪುರೇಷೆಯನ್ನು ಸಿದ್ಧಪಡಿಸಬೇಕು ಎಂದು ಸೂಚನೆ ನೀಡಿದ್ದೇನೆ ಎಂದು ಸಚಿವರು ತಿಳಿಸಿದರು.

**ಸ್ಲಂ ನಿವಾಸಿಗಳಿಗೆ ಇ ಖಾತಾ ನೀಡಲು ಸೂಚನೆ:** ರಾಯಚೂರು ನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವ ಕೊಳಗೇರಿಗಳ ಅರ್ಹ ನಿವಾಸಿಗಳಿಗೆ ಖಾತೆ ಮಾಡಿಕೊಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಬಡವರಿಗೆ ಇ-ಖಾತಾ ವಿತರಣೆ ಮಾಡಬೇಕು. ನೀರಿನ ಮತ್ತು ವಿದ್ಯುತ್ ಶುಲ್ಕವನ್ನು ನಿಗದಿತವಾಗಿ ಪಾವತಿ ಮಾಡುತ್ತಿರುವ ಮತ್ತು ಹಲವು ದಶಕಗಳಿಂದ ವಾಸವಿರುವ ಅರ್ಹ ನಿವಾಸಿಗಳೆಲ್ಲರಿಗೂ ಇ ಖಾತಾ ಮಾಡಿಕೊಡಲು ಕ್ರಮ **(2ನೇಪುಟಕ್ಕೆ)**

## ಪಲ್ಸ್ ಪೋಲಿಯೋ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆ

## ಪಲ್ಸ್ ಪೋಲಿಯೋ ಗುರಿ ತಲುಪಲು ಅಗತ್ಯ ಕ್ರಮವಹಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ.



ಯುವಮಾರ್ಗ ಸುದ್ದಿ

**ರಾಯಚೂರು,ಡಿ.4–**ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಡಿ ಇದೇ ಡಿ.21 ರಿಂದ 24ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಜಿಲ್ಲೆಯಲ್ಲಿ 5 ವರ್ಷದೊಳಗಿನ 2,55,257 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಗುರಿ ತಲುಪಲು ಅಗತ್ಯ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಡಿಸೆಂಬರ್ 04ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮತ್ತು ನಗರ ಪ್ರದೇಶದ ಎಲ್ಲ ಮಕ್ಕಳಿಗೆ ಪೋಲಿಯೋ ಲಸಿಕಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ಜಿಲ್ಲೆಯಲ್ಲಿನ 0–5 ವರ್ಷದೊಳಗಿನ ಯಾವುದೇ ಮಗು ಲಸಿಕೆ ಸೌಲಭ್ಯದಿಂದ ಹೊರಗುಳಿಯಬಾರದು. ವಿವಿಧ ರಾಜ್ಯಗಳಿಂದ ಉದ್ಯೋಗ ಹರಸಿ ಬಂದಂತಹ ಕಾರ್ಮಿಕ ಕುಟುಂಬ ಮಕ್ಕಳನ್ನೂ ಗುರುತಿಸಿ ಲಸಿಕೆ ಹಾಕಬೇಕು ಎಂದು ತಿಳಿಸಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ವಿವಿಧ ಇಲಾಖೆಗಳ ಅಧಿಕಾರಿಗಳು ತಮ್ಮ ಇಲಾಖೆ ವಾಹನಗಳನ್ನು ನಿಗದಿತ ಸಮಯಕ್ಕೆ ನಿಯೋಜಿಸಬೇಕು. ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಯಾವುದೇ ರೀತಿಯ ತೊಂದರೆಯಾಗದಂತೆ ಸಂಬಂಧಿಸಿದ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಸೂಚಿಸಿದರು.

ಈ ಕಾರ್ಯಕ್ರಮ ವ್ಯಾಪಕ ಪ್ರಚಾರಕ್ಕಾಗಿ ಶಾಲಾ ಮಕ್ಕಳಿಂದ ಜಾಥಾ ಏರ್ಪಡಿಸುವುದರ ಮೂಲಕ ಸಾರ್ವಜನಿಕರಲ್ಲಿ ಪಲ್ಸ್ ಪೋಲಿಯೋ ಲಸಿಕೆ ಕುರಿತು ಜಾಗೃತಿ ಮೂಡಿಸಬೇಕು. ಸ್ಥಳೀಯ ಸಂಸ್ಥೆಗಳ ವತಿಯಿಂದ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಆಡಿಯೋ ಮೂಲಕ ಕಸ ವಿಲೇವಾರಿ ವಾಹನಗಳಲ್ಲಿ ಪ್ರಚುರಪಡಿಸಬೇಕು ಎಂದು ತಿಳಿಸಿದರು.

**ಕಾರ್ಯಕ್ರಮದ ಮಹತ್ವ ತಿಳಿಸಿ:** ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ತಾಯಂದಿರ ಸಭೆಗಳಲ್ಲಿ ಲಸಿಕಾ ದಿನಾಂಕಗಳ ಕುರಿತು, ಪಲ್ಸ್ ಪೋಲಿಯೋ ಕಾರ್ಯಕ್ರಮದ ಮಹತ್ವದ ಕುರಿತು ತಿಳಿಸಬೇಕು. ಲಸಿಕಾ ದಿನ ಅಂಗನವಾಡಿ ಕೇಂದ್ರವನ್ನು ತೆರೆದಿಡಲು ಸೂಚಿಸಿ ಮಕ್ಕಳಿಗೆ ಲಸಿಕೆ ಹಾಕಿಸಬೇಕು.**(2ನೇಪುಟಕ್ಕೆ)**

## ಸಾಲುಮರದ ತಿಮ್ಮಕ್ಕ ದೈವಿವನಕ್ಕೆ ಭೂಮಿಪೂಜೆ

## ಉದ್ಯಾನವನದ ಸದುಪಯೋಗ ಪಡೆದುಕೊಳ್ಳಿ : ಶರಣಗೌಡ ಪಾಟೀಲ್ ಬಯ್ಯಾಪೂರ

ಯುವಮಾರ್ಗ ಸುದ್ದಿ




**ಲಿಂಗಸುಗೂರು,ಡಿ.4–** ಪಟ್ಟಣದ ಹೊರವಲಯದಲ್ಲಿ ಸಾಲುಮರದ ತಿಮ್ಮಕ್ಕ ಹೆಸರಿನ ದೈವಿವನಕ್ಕೆ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರ ಭೂಮಿಪೂಜೆ ನೆರವೇರಿಸಿದರು.

ಅರಣ್ಯ ಇಲಾಖೆಯ 2024–25ನೇ ಸಾಲಿನ ಲೆಕ್ಕ ಶೀರ್ಷಿಕೆಯಡಿ ಹೊಸ ವೃಶೋಧ್ಯಾನ ನಿರ್ಮಾಣಕ್ಕಾಗಿ ಇರುವ ವಾರ್ಷಿಕ ಗುರಿಯಲ್ಲಿ ನಿಗದಿಪಡಿಸಿದ ಅನುದಾನದಲ್ಲಿ 80 ಲಕ್ಷ ರೂಪಾಯಿಗಳು ಮಂಜೂರಾಗಿದ್ದು, ಇದೊಂದು ಮಾದರಿ ಉಧ್ಯಾನವನ್ನಾಗಿ ಅಭಿವೃದ್ಧಿ ಪಡಿಸಬೇಕು. ಸಾರ್ವಜನಿಕರಿಗೆ ಇದರ ಸದುಪಯೋಗವಾಗುವಂತೆ ನಿಗದಿತ ಅವಧಿಯೊಳಗೆ ಪರಿಸರ ಸ್ನೇಹಿ ಗಿಡ, ಮರಗಳನ್ನು ನೆಟ್ಟು ಪೋಷಣೆ ಮಾಡಬೇಕು. ಇದೊಂದು ವಾಯು ವಿಹಾರ ತಾಣವಾಗಿ ನಿರ್ಮಾಣ ಮಾಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರ ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಮಾನಪ್ಪ ವಜ್ಜಲ್, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಶರಣಪ್ಪ ಮೇಟಿ, ಗಿರಿಮಲ್ಲನಗೌಡ ಪಾಟೀಲ್, ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಬಸವರಾಜಗೌಡ ಗಣೇಕಲ್, ಬಿಜೆಪಿ ಮಂಡಲ ಅಧ್ಯಕ್ಷ ಕೆ.ನಾಗಭೂಷಣ, ಹುಲ್ಲೇಶ ಸಾಹುಕಾರ್, ಮುಖಂಡರಾದ ಗುಂಡಪ್ಪ ನಾಯಕ, ಡಿಜಿ ಗುರಿಕಾರ, ಗುಂಡಪ್ಪ ನಾಯಕ, ಅನಿಸ್‌ಪಾಷಾ, ಸೋಮಶೇಖರ ಐದನಾಳ, ಚನ್ನಾರೆಡ್ಡಿ ಬಿರಾದಾರ, ಶಶಿಧರ ಪಾಟೀಲ್ ಸೇರಿ ಅರಣ್ಯ ಇಲಾಖೆ ಅಧಿಕಾರಿಗಳು ಇದ್ದರು.

## ಮೊದಲನೇಯ ಪುಟದಿಂದ

# ಸಂಪುಟ ಸಭೆಯಲ್ಲಿ ವಿವಾದಿತ ಕಾನೂನುಗಳ ಕುರಿತು ಚರ್ಚೆ

ಸರ್ಕಾರ ವಿವಾದವನ್ನು ಕೆದಕುತ್ತಿದೆ ಪ್ರಸ್ತುತ ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಕೊಳ್ಳಿ ಇಡುವ ಮೂಲಕ ವಿವಾದವನ್ನು ಕೆಣಕುತ್ತಿದೆ.

ಅಧಿಕಾರ ಹಂಚಿಕೆಯ ವಿವಾದ ರಾಜ್ಯದಲ್ಲಿ ವ್ಯಾಪಕ ಚರ್ಚೆಯಾಗುತ್ತಿರುವ ಹಂತದಲ್ಲಿ ವಿವಾದಿತ ಕಾನೂನುಗಳನ್ನು ಮುನ್ನಡೆಗೆ ತರಲಾಗುತ್ತಿದೆ ಎಂಬ ಆರೋಪಗಳು ಕೇಳಿ ಬಂದಿವೆ.

ಉಳಿದಂತೆ ಬಯಲು ಸೀಮೆ ಪ್ರದೇಶ ಅಭಿವೃದ್ಧಿ ಮಂಡಳಿ, ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ, ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ, ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಸೇರಿದಂತೆ ಇತರ ಕಾನೂನುಗಳ ಬಗ್ಗೆ ಚರ್ಚೆ ನಡೆಸಲಾಗಿದೆ.

2025 ನೇ ಸಾಲಿನಲ್ಲಿ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ನಡೆದಿದ್ದು, 100 ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣ ಖರ್ಚು ಮಾಡಲಾಗಿದೆ. ಅದಕ್ಕೆ ಸಂಪುಟದಲ್ಲಿ ಘಟನೋತ್ತರ ಅನುಮೋದನೆ ನೀಡಲಾಗಿದೆ.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಗಣಕೀಕರಣಕ್ಕಾಗಿ ಕೇಂದ್ರ ಸರ್ಕಾರದ ನೆರವು ಬಳಕೆಗೆ ಖಾಸಗಿ ಸಂಸ್ಥೆಗೆ ಗುತ್ತಿಗೆ ನೀಡುವ ಬಗ್ಗೆಯೂ ಚರ್ಚಿಸಲಾಗಿದೆ. ಕರ್ನಾಟಕ ಒಳನಾಡು ನೌಕೆ ನಿಯಮಗಳ ಬಗ್ಗೆ ವಿಚಾರ ವಿನಿಮಯ ನಡೆದಿದೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಕಲಬುರಗಿ, ಗದಗ, ದಾವಣಗೆರೆ, ಮಂಗಳೂರು, ಬೆಂಗಳೂರಿನ ಕೆಂಗೇರಿ ಸಮೀಪ ಭೀಮನಕುಪ್ಪೆ ಹಾಗೂ ಮೈಸೂರಿನಲ್ಲಿ ಅತ್ಯಾಧುನಿಕ ಕೌಶಲ್ಯ ಪ್ರಯೋಗಾಲಯಗಳನ್ನು 452 ಕೋಟಿ ರೂಪಾಯಿಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸುವ ಬಗ್ಗೆ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ರಾಷ್ಟ್ರಿ?ಯ ಆರೋಗ್ಯ ಅಭಿಯಾನ ಯೋಜನೆಯಡಿ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಮಿತಿ ಆವರಣದಲ್ಲಿ 28 ಕೋಟಿ ರೂಪಾಯಿ ಖರ್ಚು ಮಾಡಿ ಕ್ರಿಟಿಕಲ್ ಕೇರ್ ಬ್ಲಾಕ್ ನಿರ್ಮಿಸಲು ಚರ್ಚಿಸಲಾಗಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ 19 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 304 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಚರ್ಚಿಸಲಾಗಿದೆ.

ಕುರಿ ಮತ್ತು ಮೇಕೆಗಳನ್ನು ಬಾಧಿಸುವ ನೀಲಿ ನಾಲಿಗೆ ರೋಗ ಹಾಗೂ ಇನ್ನಿತರ ರೋಗಗಳಿಗೆ ಲಸಿಕೆ ತಯಾರಿಸಲು ಹೆಬ್ಬಾಳದಲ್ಲಿರುವ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಯಲ್ಲಿ ಅತ್ಯಾಧುನಿಕ ಪ್ರಯೋಗಾಲಯ ಸ್ಥಾಪಿಸಲು 27 ಕೋಟಿ ರೂಪಾಯಿಗಳನ್ನು ಒದಗಿಸಲಾಗುತ್ತಿದೆ. ಬೆಂಗಳೂರಿನ ಸಜ್ಜೆಪಾಳ್ಯದಲ್ಲಿರುವ ನಿರಾಶ್ರಿತರ ಪರಿಹಾರ ಕೇಂದ್ರದ 03 ಎಕರೆ ಜಮೀನನ್ನು ನೆಫ್ರೊ? ಯುರಾಲಜಿ ಸಂಸ್ಥೆಯ ಆಸ್ಪತ್ರೆ ನಿರ್ಮಾಣಕ್ಕಾಗಿ ಗುತ್ತಿಗೆ ಆಧಾರದ ಮೇಲೆ ನೀಡಲಾಗುತ್ತಿದೆ.

ಆಯುಷಾನ್ ಭಾರತ್ ಯೋಜನೆಯಡಿ 217 ಕೋಟಿ ರೂಪಾಯಿ ಖರ್ಚು ಮಾಡಿ 334 ಆಯುಷಾನ್ ಆರೋಗ್ಯ ಮಂದಿರಗಳನ್ನು ನಿರ್ಮಿಸಲು, 15ನೇ ಹಣಕಾಸು ಆಯೋಗದ ಅನುದಾನದಲ್ಲಿ 22 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಲು, ಜೊತೆಗೆ 80 ಕೋಟಿ ರೂಪಾಯಿ ವೆಚ್ಚದಲ್ಲಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಲು ಚರ್ಚಿಸಲಾಗಿದೆ.

ಫಾರ್ಮಸಿ ಡಿಪ್ಲೊಮೋ ತೇರ್ಗಡೆಯಾಗಿರುವ ಒಂದು ಸಾವಿರ ವಿದ್ಯಾರ್ಥಿಗಳನ್ನು ಮಂಜೂರಾಗಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ 11 ತಿಂಗಳ ಅವಧಿಯ ಟ್ರೈಫಂಡ್ ಆಧಾರದ ಮೇಲೆ ನೇಮಿಸಲು ಸಮತಿಸಲಾಗಿದೆ. 108 ಆರೋಗ್ಯ ಕವಚ ಸೇವೆಯಡಿಯಲ್ಲಿ ನೇಮಕಗೊಳ್ಳಲಿರುವ ತುರ್ತು ವೈದ್ಯಕೀಯ ಸಿಬ್ಬಂದಿ ಮತ್ತು ಚಾಲಕರಿಗೆ ಕನಿಷ್ಠ ವೇತನ ದರದಲ್ಲಿ ಮೂಲವೇತನ ನಿಗದಿ ಮಾಡುವುದು ಹಾಗೂ ಹಿಂದಿನ ಸೇವಾ ಅನುಭವ ಆದರೆ ಪ್ರತಿ ವರ್ಷಕ್ಕೆ ಶೇಕಡ ಒಂದರಷ್ಟು , ಗರಿಷ್ಠ 15 ವರ್ಷಗಳ ಅವಧಿಗೆ ಶೇ.15ರಷ್ಟು ಕಾರ್ಯಕ್ಷಮತೆ ವೇತನ ಹಾಗೂ ಶೇಕಡ 10 ರಷ್ಟು ಪ್ರೊ?ತ್ಸಾಹ ಧನ ನೀಡಲು ಚರ್ಚಿಸಲಾಗಿದೆ.ಹುಬ್ಬಳ್ಳಿಯ ಕುಸುಗಲ್ಲ ಗ್ರಾಮದಲ್ಲಿ ಕಾಂಗ್ರೆಸ್? ಭವನ ನಿರ್ಮಾಣಕ್ಕೆ ನಿವೇಶನ ನೀಡಲು ನಿರ್ಧರಿಸಲಾಗಿದೆ.

# ಪಲ್ಸ್ ಪೋಲಿಯೋ ಗುರಿ ತಲುಪಲು ಅಗತ್ಯ ಕ್ರಮವಹಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ.

ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು, ಮೇಲ್ವಚಾರಕರು ಲಸಿಕಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು. ಅಲ್ಲದೆ ಜಿಲ್ಲೆಯ ಎಲ್ಲ ಸಿ.ಡಿ.ಪಿ.ಓ.ಗಳು ತಾಲ್ಲೂಕು ಮಟ್ಟದ ಅನುಷ್ಟಾನ ಸಮಿತಿ ಸದಸ್ಯರಾಗಿದ್ದು, ಕಾರ್ಯಕ್ರಮ ಸಮರ್ಪಕ ಅನುಷ್ಟಾನದ ಮೇಲ್ವಚಾರಣೆ ವಹಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮೀಣ ಭಾಗದ ಮಕ್ಕಳನ್ನು ಮರೆಯಬೇಡಿ: ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಜಿಲ್ಲೆಯಲ್ಲಿನ ಯಾವುದೇ ಒಬ್ಬ ಮಗು ಸಹ ಲಸಿಕೆಯಿಂದ ಹೊರಗುಳಿಯಬಾರದು. ವಿಶೇಷವಾಗಿ ಗ್ರಾಮೀಣ ಮತ್ತು ಹೊಲಗಳಲ್ಲಿ ವಾಸಿಸುತ್ತಿರುವ ಮಕ್ಕಳನ್ನು ಗಮನಹರಿಸಿ ಅವರಿಗೂ ಕೂಡ ಪಲ್ಸ್ ಪೋಲಿಯೋ ಲಸಿಕೆ ನೀಡಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಕೂಲಿ ಕೆಲಸಕ್ಕೆ ತೆರಳುವ ಕಾರ್ಮಿಕರು ತಮ್ಮ ಮಕ್ಕಳನ್ನು ಕೆಲಸದ ಸ್ಥಳಗಳಲ್ಲಿ ಕಾಣ ಸಿಗುತ್ತಾರೆ. ಅವರನ್ನು ಗುರುತಿಸಿ ಪ್ರತಿಯೊಂದು ಮಗುವಿಗೂ ಲಸಿಕೆ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ವಿಜಯಶಂಕರ್, ಜಿಲ್ಲಾ ಆರ್.ಸಿ.ಹೆಚ್.ಅಧಿಕಾರಿ ಡಾ.ನಂದಿತಾ ಎಮ್.ಎನ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಕಾರ್ಮಿಕ ಇಲಾಖೆಯ ಜಿಲ್ಲಾ ಅಧಿಕಾರಿ ಆರತಿ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಅಧಿಕಾರಿ ಶಿವಮಾನ್ಯಪ್ಪ, ಡಬ್ಲ್ಯುಹೆಚ್‌ಓ ಡಾ.ಅನೀಲ್ ತಾಳಿಕೋಟೆ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಿವಕುಮಾರ್, ಟಿಬಿ ಅಧಿಕಾರಿ ಡಾ.ಎಂ.ಡಿ.ಸಾಜೀದ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

# ನೂತನ ಬಡಾವಣೆ ನಿರ್ಮಾಣಕ್ಕೆ ಸರ್ಕಾರ ಬದ್ಧ: ನಗರಾಭಿವೃದ್ಧಿ ಇಲಾಖೆ ಸಚಿವ ಬೈರತಿ ಸುರೇಶ್ ಭರವಸೆ

ಕೈಗೊಳ್ಳಬೇಕು. ಯಾರಿಗೂ ಖಾತಾ ವಿಚಾರದಲ್ಲಿ ಸರ್ಕಾರಿ ಕಚೇರಿಗಳಿಗೆ ಅಲೆದಾಡಿಸಬಾರದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾಗಿ ಸಚಿವರು ಹೇಳಿದರು. ನಗರಾಭಿವೃದ್ಧಿ ಇಲಾಖೆಯಿಂದ ಬಾಕಿ ಇರುವ ಎಲ್ಲಾ ಕಾಮಗಾರಿಗಳನ್ನು 15 ದಿನಗಳೊಳಗಾಗಿ ಪೂರ್ಣಗೊಳಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

ಜುಬಿನ್ ಉತ್ಸಾಹಿ ಅಧಿಕಾರಿ: ದಕ್ಷ ಹಾಗೂ ಉತ್ಸಾಹಿ ಅಧಿಕಾರಿಯಾಗಿರುವ ಜುಬಿನ್ ಮೊಹಪಾತ್ರ ಅವರು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾಗಿ ಅತ್ಯಂತ ಕಡಿಮೆ ಅವಧಿಯಲ್ಲಿಯೇ ಉತ್ತಮ ಕಾರ್ಯಗಳನ್ನು ಮಾಡಿದ್ದಾರೆ. ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಮಾರ್ಗದರ್ಶನದಲ್ಲಿ ಜುಬಿನ್ ಮೊಹಪಾತ್ರ ಅವರು, ಮಹಾನಗರ ಪಾಲಿಕೆಯಲ್ಲಿ ಹೊಸ ಹೊಸ ಪ್ರಯೋಗ ಮಾಡುತ್ತ ರಾಯಚೂರು ಸಿಟಿಯ ಸೌಂದರ್ಯೀಕರಣಕ್ಕೆ ಶ್ರಮಿಸುತ್ತಿದ್ದು ಸಾರ್ವಜನಿಕರು ಅವರಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡುವುದಾಗಿ ಸಚಿವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಶಾಸಕರಾದ ಬಸನಗೌಡ ತುರವಿಹಾಳ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ ಇದ್ದರು.

# ಬಡತನ ಶೈಕ್ಷಣಿಕ ಸಾಧನೆಗೆ ಅಡ್ಡಿಯಾಗದು: ಡಿವೈಎಸ್ಪಿ ವೆಂಕಟೇಶ ಹೊಗಿಬಂಡಿ

ಸಾಧ್ಯವಿದೆ. ಜೀವನದಲ್ಲಿ ಬಡತನ ಸಹಜ ಆದರೆ ಸಾಧಿಸುವ ಛಲವಿರುವ ಯಾವುದೇ ವಿದ್ಯಾರ್ಥಿ ಅಥವಾ ವ್ಯಕ್ತಿಗೆ ಬಡತನ ಅಡ್ಡಿಯಾಗುವದಿಲ್ಲ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಗಳು ತಮ್ಮ ಕೌಟುಂಬಿಕ ಮತ್ತು ಬಡತನದಂತಹ ಸಮಸ್ಯೆಗಳನ್ನು ಬದಿಗೊತ್ತಿ ಶಾಲೆ ಮತ್ತು ಅಭ್ಯಾಸದ ಕಡೆಗೆ ಹೆಚ್ಚಿನ ಗಮನ ಅರಿಸಬೇಕಿದೆ ಎಂದರು. ನಂತರ ಶಾಲೆ ವತಿಯಿಂದ ಡಿವೈಎಸ್ಪಿ ವೆಂಕಟೇಶ್ ಹೊಗಿಬಂಡಿ ಅವರನ್ನು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಉಪ ಪ್ರಾಂಶುಪಾಲರಾದ ಮಹಿಬೂಬ್ ಪಾಷಾ ಕುರ್ಡಿ, ಸಹ ಶಿಕ್ಷಕರಾದ ಕರಿಬಸಯ್ಯಸ್ವಾಮಿ, ಶಿವಾಜಿ, ರಿಯಾಜ್ ಹುಸೇನ್, ಸುರೇಶ ಕುಮಾರ ಹಾಗೂ ಶಿಕ್ಷಕಿಯರಾದ ಶೈಲಜಾ, ಜಯಶ್ರೀ, ಲತಾ ತಾಸೀನ, ಮಜುಳಾ,ಯಶೋಧ, ನಿರ್ಮಲ,ಗೋವಿಂದರಾಜು, ಮಂಜುಳಾ,ಶಾಹಿನ ಬೇಗಂ ಉಪಸ್ಥಿತರಿದ್ದರು.

# ಆಳಂದ ತಾಲೂಕಿನಲ್ಲಿ ಕಳಪೆ ರಸ್ತೆಗಳ ನಿರ್ಮಾಣ: ಮಾಜಿ ಶಾಸಕ ಸುಭಾಷ್‌ಆರ್ ಗುತ್ತೇದಾರ ಆರೋಪ



**ಆಳಂದ.ಡಿ.4–**ಕಲ್ಯಾಣಕರ್ನಾಟಕ ಪ್ರದೇಶಅಭಿವೃದ್ಧಿ( ಕೆಕೆಆರ್‌ಡಿಬಿ) ಯೋಜನೆಅಡಿಯಲ್ಲಿ ಕೈಗೊಳ್ಳುತ್ತಿರುವ ಅನೇಕ ಕಾಮಗಾರಿಗಳು ಕಳಪೆ ಮಟ್ಟದಲ್ಲಿ ನಿರ್ಮಿಸಿ ಸರ್ಕಾರದ ಹಣ ಲೂಟಿ ಮಾಡುವ ಕೆಲಸ ಆಳಂದ ತಾಲೂಕಿನಲ್ಲಿ ನಡೆಯುತ್ತಿದ್ದರೂತಪ್ಪಿತಸ್ಥರ ವಿರುದ್ಧಯಾವುದೇಕಠಿಣಕ್ರಮ ಕೈಗೊಳ್ಳುತ್ತಿಲ್ಲ ಇದರಿಂದ ಜಿಲ್ಲಾಡಳಿತವನ್ನು ಸಂಶಯದಿಂದ ನೋಡುವಂತಾಗಿದೆಎಂದು ಆಳಂದ ಮಾಜಿ ಶಾಸಕ ಸುಭಾಷ್‌ಆರ್‌ಗುತ್ತೇದಾರ ಆರೋಪಿಸಿದರು.

ಗುರುವಾರ ಕಲಬುರಗಿಯಕಲ್ಯಾಣಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಚೇರಿಎದುರುಗಡೆ ಹಮ್ಮಿಕೊಂಡಿದ್ದ ಧರಣಿ ಸತ್ಯಾಗ್ರಹದಲ್ಲಿ ಸಾರ್ವಜನಿಕರೊಂದಿಗೆ ಭಾಗವಹಿಸಿ ಮಾತನಾಡಿದ ಅವರು, ಕಲಬುರಗಿ ಆಳಂದ ರಾಜ್ಯ ಹೆದ್ದಾರಿಎಸ್ ಎಚ್ 10 ರಿಂದಎಲೆನಾವದಗಿ– ಕೊಡಲಹಂಗರಗಾ ಹತ್ತಿರದಿಂದ ಎಲೆನಾವದಗಿಗ್ರಾಮದರಸ್ತೆ 4.50 ಕಿ.ಮೀ ಕಾಮಗಾರಿ ಮುಗಿಯುವ ಹಂತದಲ್ಲಿಯೇಕಿತ್ತು ಹೋಗಿರುತ್ತದೆ. ಮೇ ತಿಂಗಳಲ್ಲಿ ಹಾಳಾಗಿ ಹೋಗಿರುತ್ತದೆ. ಮನುಷ್ಯರಿಗೆ ನಡೆದುಕೊಂಡು ಹೋಗಲು ಬರುತ್ತಿಲ್ಲ. ದ್ವಿಚಕ್ರ ವಾಹನಗಳು ತಿರುಗಾಡಲು ಬರುತ್ತಿಲ್ಲ. ಎಷ್ಟೋಜನರು ಬಿದ್ದು ಕೈಕಾಲು ಮುರಿದುಕೊಂಡಿರುತ್ತಾರೆ. ಜಿಲ್ಲಾಡಳಿತಕ್ಕೆ ಮಳೆಗಾಲಕ್ಕಿಂತ ಮುಂಚಿತವಾಗಿಯೇ ಈ ವಿಷಯದಕುರಿತುದೂರು ನೀಡಿದರೂಕೂಡಗುತ್ತಿಗೆದಾರರ ವಿರುದ್ಧಯಾವುದೇ ಕಾನೂನು ಕ್ರಮಕೈಗೊಂಡಿಲ್ಲ ಎಂದು ದೂರಿದರು.

ಸರ್ಕಾರದ 4 ಕೋಟಿ ರೂಪಾಯಿ ಖರ್ಚಾಗಿದೆ, ನಾಲ್ಕು ತಿಂಗಳು ರಸ್ತೆ ಬಾಳಿಕೆ ಬಂದಿರುವುದಿಲ್ಲ. ಇದುಯಾವ ವೈಜ್ಞಾನಿಕ ಪದ್ಧತಿಇರಬಹುದು. ಇಡೀರಸ್ತೆಯತುಂಬೆಲ್ಲ ಹುಡುಕಿದರೂ ನಿಮಗೆ ಡಾಂಬರ್ ನೋಡಲು ಸಿಗುವುದಿಲ್ಲ. ಹೀಗಿರುವಾಗ ಯಾವ ಗುಣಮಟ್ಟದರಸ್ತೆ ನಿರ್ಮಿಸಿರಬೇಕು ಯೋಚನೆ ಮಾಡಬೇಕಾಗಿರುತ್ತದೆ. ಅಂದಾಜು ಪಟ್ಟಿಯಂತೆಕಾಮಗಾರಿ ಮಾಡಿಲ್ಲ. ಪಟ್ಟಿಯಲ್ಲಿನಯಾವ ನಿಯಮಗಳು ಕೂಡ ಪಾಲನೆಯಾಗಿಲ್ಲ ಸುಳ್ಳು ಲೆಕ್ಕ ತೋರಿಸಿ 4 ಕೋಟಿ. ರೂ. ಹಣ ಲೂಟಿ ಮಾಡಿರುತ್ತಾರೆ ಎಂದು ಆರೋಪ ಮಾಡಿದ್ದಾರೆ.

ಇದೇ ರೀತಿ ವಾಗ್ಧರಿರಿಪ್ಪನಪಲ್ಲಿ ಮುಖ್ಯರಸ್ತೆಯಿಂದ ಪಡಸಾವಳಿ ಗ್ರಾಮದವರೆಗಿನ ರಸ್ತೆ ಅಭಿವೃದ್ಧಿ ಪಡಿಸುವಕಾಮಗಾರಿರೂ. 1.00 ಕೋಟಿ(ಕೆಕೆಆರ್‌ಡಿಬಿ 2023–24ನೇ ಸಾಲಿನ) ಮಾಡಿರುತ್ತಾರೆ. ಈ ರಸ್ತೆಯೂ ಮಾಡಿದ 2 ತಿಂಗಳಲ್ಲೇ ಹಾಳಾಗಿ ಹೋಗಿರುತ್ತದೆ. ಇಲ್ಲಿಯೂ ಸರ್ಕಾರದ ಬೊಕ್ಕಸಕ್ಕೆ 1 ಕೋಟಿ ನಷ್ಟವಾಗಿರುತ್ತದೆ.ತೀರ್ಥಗ್ರಾಮಕ್ಕೆ ಸಂಪರ್ಕಕಲ್ಪಿಸುವರಸ್ತೆಯೂ ಕಳಪೆಯಿಂದ ನಿರ್ಮಾಣ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿದ್ದಾರೆ ಎಂದು ದೂರು ಸಲ್ಲಿಸಿದ್ದಾರೆ.

ಆಳಂದ ತಾಲೂಕಿನ ವಾಗ್ಧರಿ– ರಿಪ್ಪನಪಲ್ಲಿ ಮುಖ್ಯರಸ್ತೆಯಿಂದ ಪಡಸಾವಳಿ ರಸ್ತೆಕಾಮಗಾರಿಯುಕರ್ನಾಟಕ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದವರಿಗೆ ವಹಿಸಿಕೊಟ್ಟಿದ್ದು, ಅದು ನಿಯಮಬಾಹಿರವಾಗಿ ಹಣ ಲೂಟಿ ಮಾಡಲೆಂದೇ ಚಿತ್ತಾಪೂರ ಉಪವಿಭಾಗದವರಿಗೆ ನೀಡಿರುತ್ತಾರೆ. ಆಳಂದ ಕಾಮಗಾರಿಯ ಬಿಲ್ಲನ್ನು ಎಇ, ಎಇಇ ಏಖಐಆಐ ಚಿತ್ತಾಪೂರದವರು ದಾಖಲಿಸಿ ಹಣ ಲೂಟಿ ಮಾಡಿರುತ್ತಾರೆ. ಆಳಂದ ತಾಲೂಕು ಎಇಇ KRIDL SUB DIVISION AFZALPUR ವ್ಯಾಪ್ತಿಗೆ ಬರುತ್ತದೆ. ಇಷ್ಟೆಲ್ಲ ನಡೆದರೂ ಜಿಲ್ಲಾಡಳಿತ ಮೌನವಾಗಿರಲುಕಾರಣವೇನು?.ಇದಕ್ಕೆ ಸರ್ಕಾರವೇ ಉತ್ತರಿಸಬೇಕಾಗಿದೆ ಎಂದು ಪ್ರಶ್ನಿಸಿದ್ದಾರೆ.

ಆಳಂದ ತಾಲೂಕಿನಾದ್ಯಂತ'ಕೆಕೆಆರ್‌ಡಿಬಿ ಅನುದಾನದ ಅನೇಕ ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ನಿರ್ಮಿಸಿ ಕೋಟ್ಯಾಂತರ ರೂ.ಗಳನ್ನು ಲೂಟಿ ಮಾಡುತ್ತಿರುವುದು ಸರ್ವೆ ಸಾಮಾನ್ಯವಾಗಿಬಿಟ್ಟಿದೆ. ಅಧಿಕಾರಿಗಳಿಗೆ ಮತ್ತುಗುತ್ತಿಗೆದಾರರಿಗೆ ಭಯವಿಲ್ಲದಂತಾಗಿದೆ. ಭೃಷ್ಟಾಚಾರತಾಂಡವವಾಡುತ್ತಿದೆ. ಇದೆಲ್ಲವನ್ನು ಖಂಡಿಸಿ ಕಳಪೆ ಗುಣಮಟ್ಟದಿಂದರಸ್ತೆ ನಿರ್ಮಿಸಿರುವ ಗುತ್ತಿಗೆದಾರರು ಮತ್ತುಅದಕ್ಕೆ ಸಹಕರಿಸಿರುವ ಅಧಿಕಾರಿಗಳ ವಿರುದ್ಧಕಠಿಣವಾದ ಕಾನೂನು ಕ್ರಮಜರುಗಿಸುವಂತೆ ಒತ್ತಾಯಿಸಿದ್ದಾರೆ. ಸದರಿ ವಿಷಯದಕುರಿತು 15 ದಿನಗಳೊಗಾಗಿಗುತ್ತಿಗೆದಾರರನ್ನುಕಪ್ಪುಪಟ್ಟಿಗೆ ಸೇರಿಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧಕಠಿಣ ಕಾನೂನು ಕ್ರಮ ಕೈಗೊಳ್ಳಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಬೇಕು. ಇಲ್ಲದಿದ್ದರೇ 15 ದಿನಗಳ ನಂತರ ಬೆಂಗಳೂರಿನ ಸ್ವಾತಂತ್ರ್ಯಉದ್ಯಾನವನದಲ್ಲಿತಾಲೂಕಿನ ಸಾರ್ವಜನಿಕರೊಂದಿಗೆ ಸತ್ಯಾಗ್ರಹ ಕೈಗೊಳ್ಳಲಾಗುವುದು ಎಂದುಕಲ್ಯಾಣಕರ್ನಾಟಕ ಪ್ರದೇಶಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಸಲ್ಲಿಸಿದ ಮನವಿ ಪತ್ರದಲ್ಲಿ ಆಗ್ರಹಪಡಿಸಿದ್ದಾರೆ.

ಧರಣಿಯಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಅಶೋಕ ಬಗಲಿ, ಧರ್ಮಣ್ಣಾ ಇಟಗಾ, ಅವ್ವಣ್ಣಾ ಮ್ಯಾಕೇರಿ, ವೀರಣ್ಣಾ ಮಂಗಾಣೆ, ಅಣ್ಣಾರಾವ ಪಾಟೀಲ ಕವಲಗಾ, ಬಾಬುಗೌಡ ಪಾಟೀಲ, ಚಂದ್ರಕಾಂತ ಭೂಸನೂರ, ಶಿವಪ್ಪ ವಾರಿಕ, ಬಸವರಾಜ ಬಿರಾದಾರ, ಸಂತೋ ಹಾದಿಮನಿ, ಸಿ ಕೆ ಪಾಟೀಲ, ಆನಂದರಾವಗಾಯಕವಾಡ, ಶರಣಪ್ಪ ನಾಟೀಕಾರ, ಶಾಂತಕುಮಾರ ಪರೀಟ, ವಿಜಯಕುಮಾರ ಹುಲಸೂರೆ, ಅಶೋಕ ಗುತ್ತೇದಾರ, ಮಲ್ಲಣ್ಣಾ ನಾಗೂರೆ, ಸುನೀತಾ ಪೂಜಾರಿ, ಗೌರಿಚಿಚಕೋಟಿ, ಮಲ್ಲಿಕಾರ್ಜುನ ಕಂದಗೂಳೆ, ಪ್ರಕಾಶ ಮಾನೆ, ಸೀತಾರಾಮ ಜಮಾದಾರ, ಸುನೀಲ ಹಿರೋಳಿಕರ, ನಾಗರಾಜ ಶೇಗಜಿ, ಗುಂಡಪ್ಪ ಪೂಜಾರಿ, ರವಿ ಮದನಕರ, ಶಿವಪ್ರಕಾಶ ಹೀರಾ, ಶರಣಗೌಡ ಪಾಟೀಲ ದೇವಂತಗಿ, ರುದ್ರಯ್ಯ ಸ್ವಾಮಿ, ಅಶೋಕ ಹತ್ತರಕಿ, ರಮೇಶ ಬಿರಾದರ, ಎಂ ಎಸ್ ಪಾಟೀಲ, ಪ್ರಕಾಶ ಸಣಮನಿ, ಮಹೇಶ ಗೌಳಿ, ಈರಣ್ಣಾ ಮೇತ್ರೆ ಸೇರಿದಂತೆ ಅನೇಕ ಜನತಾಲೂಕಿನರೈತರು ಭಾಗವಹಿಸಿದ್ದರು.

ಧರಣಿ ಆರಂಭಕ್ಕೂ ಮುನ್ನ ಜಿಲ್ಲಾಧಿಕಾರಿಗಳ ಕಚೇರಿಯಿಂದ ಕಲ್ಯಾಣ ಕರ್ನಾಟಕ ಪ್ರದೇಶಅಭಿವೃದ್ಧಿ ಮಂಡಳಿಯ ಕಚೇರಿಯವರೆಗೆ ಎಲೆನಾವದಗಿ, ಬೋಳಣಿ, ಪಡಸಾವಳಿ, ತೀರ್ಥ ಗ್ರಾಮಸ್ಥರು ಪಾದಯಾತ್ರೆಯೊಂದಿಗೆ ಬಂದುಕೆಕೆಆರ್‌ಡಿಬಿ ಕಚೇರಿಎದುರುಧರಣಿ ಸತ್ಯಾಗ್ರಹ ನಡೆಸಿದರು.

# ಕೂಲಿ ಕಾರ್ಮಿಕರ ನಿರುದ್ಯೋಗ ಭತ್ಯೆ ಬಗ್ಗೆ ತಕ್ಷಣ ಮಂಜೂರು ಮಾಡಿ– ರವಿ ಮಾಕಾಪೂರು

**ಲಿಂಗಸುಗೂರು,ಡಿ.4–** ತಾಲ್ಲೂಕಿನ ಹೂನೂರು ಗ್ರಾಮ ಪಂಚಾಯತ ವ್ಯಾಪ್ತಿಯ ಮಾಕಾಪುರು ಗ್ರಾಮದ ಕೂಲಿ ಕಾರ್ಮಿಕರು ಆಗಿದ್ದು ನಾವುಗಳು ಉಲ್ಲೇಖ 1ರ ಪ್ರಕಾರ ಗ್ರಾಮ ಪಂಚಾಯತ ಗೆ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕೆಲಸಕ್ಕಾಗಿ ಅರ್ಜಿ ನೀಡಿಲಾರುತ್ತದೆ. ಆದರೆ ಸುಮಾರು ಎರಡು ತಿಂಗಳು 15 ದಿನ ವರೆಗೆ ಅದರು ಕೆಲಸ ನೀಡಿರುವುದಿಲ್ಲ. ಹಾಗೂ ಉಲ್ಲೇಖ 2 ಪ್ರಕಾರ ತಾಲ್ಲೂಕ ಪಂಚಾಯತ ಲಿಂಗಸುಗೂರು



ಗೆ ನಿರುದ್ಯೋಗ ಭತ್ಯೆಗಾಗಿ ಅರ್ಜಿ ನೀಡಲಾಗಿರುತ್ತದೆ. ಆದರೆ ಇಲ್ಲಿಯ ವರೆಗೆ ಕಾರ್ಯನಿರ್ವಹಕ ಅಧಿಕಾರಿಗಳು ಹಾಗೂ ಸಹಾಯ ನಿರ್ದೇಶಕರು MGNREGA ರವರು ಯಾವುದೇ ರೀತಿಯಾದ ಕ್ರಮ ಕೈಗೊಂಡಿರುವುದಿಲ್ಲಾ, ನಾವು ಪರಿಶಿಷ್ಟ ಪಂಗಡದ ಸಮುದಾಯದ ಕೂಲಿ ಕಾರ್ಮಿಕರಾಗಿರುತ್ತೇವೆ.

ನಮ್ಮಗೆ ಅನ್ಯಾಯ ಮಾಡಿರುತ್ತಾರೆ. ಆದ್ದರಿಂದ ಮಾನ್ಯರು ಕೂಲಿ ಕಾರ್ಮಿಕರಿಗೆ ನಿರುದ್ಯೋಗ ಭತ್ಯೆ ಮಂಜೂರು ಮಾಡಬೇಕು. ಜಾತಿ ತಾರತಮ್ಯ ವಾಡಿರುತ್ತಾರೆ. ಕಾಲಹರಣ ವಾಡುತ್ತಾ ಕೂಲಿಕಾರರಿಗೆ ಹಾಗೂ ಸಹಾಯಕ ನಿರ್ದೇಶಕರು MGNREGA ಲಿಂಗಸುಗೂರು ಇವರನ್ನು ಅಮಾನತ್ತು ಮಾಡಬೇಕೆಂದು ಮಾನ್ಯರಲ್ಲಿ ಈ ಪತ್ರದ ಮೂಲಕ ವಿನಂತಿ ಮಾಡಿಕೊಳ್ಳುತ್ತೇವೆ. ಒಂದು ವೇಳೆ ನಮ್ಮ ಮನವಿ ಪತ್ರಕ್ಕೆ ವಿಳಂಬವಾದರೆ ಜಿಲ್ಲಾ ಪಂಚಾಯಿತಿ ಕಾರ್ಯಲಯ ಮುಂದೆ ಉಪಾವಾಸ ಸತ್ಯಗ್ರಹ ಪ್ರತಿಭಟನೆ ಮಾಡಲಾಗುವುದು ಎಂದು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾ ಸಮಿತಿ ಜಿಲ್ಲಾಧ್ಯಕ್ಷರಾದ ರವಿ ನಾಯಕ ಮಾಕಪೂರು ಎಚ್ಚರಿಸಿದರು.

# ಬೈಕ್‌ಗೆ ಬಸ್ ಡಿಕ್ಕಿ: ಯುವತಿ ಸಾವು

**ಜೇವರ್ಗಿ:ಡಿ.4–** ಬೈಕ್‌ಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲಿಯೇ ಯುವತಿಯೊಬ್ಬಳು ಮೃತಪಟ್ಟ ಘಟನೆ ತಾಲ್ಲೂಕಿನ ರಾಸಣಗಿ ಕ್ರಾಸ್ ಬಳಿ ಬುಧವಾರ ಸಂಜೆ ಸಂಭವಿಸಿದೆ.

ಭೂಮಿಕಾ ಮಲ್ಲಪ್ಪ ಹಂಗರಗಾ (20) ಎಂಬ ಯುವತಿ ಮೃತಪಟ್ಟಿದ್ದು, ಬೈಕ್ ಸವಾರ ಅಮೋಘಸಿದ್ದ ಭೀಮರಾಯ(21) ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾನೆ.

ಡಿ.5 ರಂದು ತಾಲ್ಲೂಕಿನ ರಾಸಣಗಿ ಗ್ರಾಮದ ಸಂಬಂಧಿಕರ ಮನೆಯಲ್ಲಿ ಮದುವೆ ಕಾರ್ಯಕ್ರಮ ನಿಶ್ಚಯ ಮಾಡಲಾಗಿತ್ತು. ಚಿಕ್ಕಮ್ಮನ ಮಗ ಅಮೋ–ಘಸಿದ್ದನೊಂದಿಗೆ ಭೂಮಿಕಾ ಬೈಕ್ ಮೇಲೆ ಯಡ್ರಾಮಿಯಿಂದ ರಾಸಣಗಿಗೆ ತೆರಳುವ ಸಂದರ್ಭದಲ್ಲಿ ಹಿಂಬದಿಯಿಂದ ಬಸ್ ಡಿಕ್ಕಿ ಹೊಡೆದು ಈ ದುರ್ಘಟನೆ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನಾ ಸ್ಥಳಕ್ಕೆ ಪಿಎಸ್‌ಐ ಗಜಾನಂದ ಬಿರಾದಾರ ಹಾಗೂ



ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಜೇವರ್ಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪುಟಿನ್ ಅದ್ದೂರಿ ಸ್ವಾಗತಕ್ಕೆ ದೆಹಲಿ ಸಜ್ಜು



**ನವದೆಹಲಿ, ಡಿ.4–** ರಷ್ಯಾ, ಉಕ್ರೇನ್ ಮೇಲೆ ಆಕ್ರಮಣ ಮಾಡಿದ ನಂತರ ಇಂದು ಭಾರತಕ್ಕೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಭೇಟಿ ನೀಡಲಿದ್ದು ಅವರನ್ನು ಸ್ವಾಗತಿಸಲು ಭಾರತ ಸಜ್ಜಾಗಿದೆ.

ಸಂಜೆ 23ನೇ ಭಾರತ–ರಷ್ಯಾ ವಾರ್ಷಿಕ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಉನ್ನತ ಮಟ್ಟದ ನಿಯೋಗದ ಜೊತೆ ಸಭೆಯಲ್ಲಿ ಭಾಗಿಯಾಗಲಿದ್ದಾರೆ.

ವ್ಲಾಡಿಮಿರ್ ಪುಟಿನ್ ಅವರ ಎರಡು ದಿನಗಳ ಭೇಟಿಯ ಸಮಯದಲ್ಲಿ ನಡೆಯುವ ಮಾತುಕತೆಗಳು ರಕ್ಷಣಾ ಸಂಬಂಧಗಳನ್ನು ಗಟ್ಟಿಗೊಳಿಸುವುದರ ಜೊತೆಗೆ ವ್ಯಾಪಾರ ಮತ್ತು ಇಂಧನ ಸಹಕಾರದ ಬಗ್ಗೆ ಗಮನಹರಿಸಲಿವೆ ಎಂದು ಉನ್ನತ ಮೂಲಗಳು ತಿಳಿಸಿವೆ.

ವ್ಲಾಡಿಮಿರ್ ಪುಟಿನ್ ಅವರ ಭಾರತ ಭೇಟಿಯ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಸಭೆ ನಡೆಸಲಿ ಪ್ರಧಾನಿ ನರೇಂದ್ರ ಮೋದಿ ಆಯೋಜಿಸಿರುವ ಖಾಸಗಿ ಭೋಜನಕೂಟದಲ್ಲಿ ಭಾಗಿಯಾಗಲಿದ್ದಾರೆ,

ಇದೇ ವೇಳೆ ವ್ಯಾಪಾರ ಮತ್ತು ಆರ್ಥಿಕ ಸಹಕಾರ ಮತ್ತು ಕೈಗಾರಿಕಾ ಸಹಕಾರ, ನವೀನ ತಂತ್ರಜ್ಞಾನಗಳು, ಸಾರಿಗೆ, ಶಾಂತಿಯುತ ಬಾಹ್ಯಾಕಾಶ ಪರಿಶೋಧನೆ, ಗಣಿಗಾರಿಕೆ, ಆರೋಗ್ಯ ಮತ್ತು ಕಾರ್ಮಿಕ ವಲಸೆ ಕಾರ್ಯಕ್ರಮಗಳಲ್ಲಿ ಇತರ "ಭರವಸೆಯ ಯೋಜನೆಗಳು" ಕುರಿತು ಚರ್ಚೆ ನಡೆಯುವ ಸಾಧ್ಯತೆಗಳಿವೆ.

ರಷ್ಯಾದ ಸಚಿವ ಯೂರಿ ಉಷಾಕೋವ್ ಪ್ರತಿಕ್ರಿಯಿಸಿ ಭಾರತ ಮತ್ತು ರಷ್ಯಾ ನಡುವಿನ ದ್ವಿಪಕ್ಷೀಯ ರಾಜಕೀಯ ಸಂವಾದ ಉಭಯ ದೇಶಗಳ ನಡುವಿನ ಬಾಂಧವ್ಯ ಬಲವರ್ಧನಗೆ ಸಾಕ್ಷಿಯಾಗಲಿದೆ ಎಂದಿದ್ದಾರೆ.

ರಷ್ಯಾದಿಂದ ತೈಲ ಖರೀದಿ ಮಾಡಲಾಗುತ್ತಿದೆ ಎನ್ನುವ ಕಾರಣದಿಂದ ಭಾರತದ ಆಮದುಗಳ ಮೇಲೆ ಶೇಕಡಾ 50 ರಷ್ಟು ಸುಂಕ ವಿಧಿಸುವ ಮೂಲಕ ಭಾರತದ ಮೇಲೆ ಸುಂಕಾಸ್ತ್ರ ಪ್ರಯೋಗಿರುವ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಿರುದ್ದ ಸೆಡ್ಡು ಹೊಡೆಯುವ ಪ್ರಯತ್ನ ಇದಾಗಿದೆ ಎಂದು ಹೇಳಲಾಗಿದೆ.

ರಷ್ಯಾ ಅಧ್ಯಕ್ಷರ ಭೇಟಿ ವೇಳೆ ರಷ್ಯಾ ಭಾರತಕ್ಕೆ ಎಸ್–57 ಫೈಟರ್ ಜೆಟ್‌ಗಳನ್ನು ಪೂರೈಸುವ ಸಾಧ್ಯತೆಯ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ ಎಂದು ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್ ಹೇಳಿದ್ದಾರೆ. ಭಾರತ ಐದನೇ ತಲೆಮಾರಿನ ಫೈಟರ್ ಜೆಟ್‌ಗಳ ಬ್ಯಾಚ್ ಅನ್ನು ಖರೀದಿಸುವ ಪ್ರಕ್ರಿಯೆಯಲ್ಲಿದ್ದು ಈ ಸಂಬಂಧ ಚರ್ಚೆ ಆಗುವ ನಿರೀಕ್ಷೆ ಇದೆ ಎಂದಿದ್ದಾರೆ.

ಬಿಗಿ ಭದ್ರತೆ

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ದೆಹಲಿಗೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ವ್ಯಾಪಕ ಭದ್ರತೆ ಕೈಗೊಳ್ಳಲಾಗಿದೆ. ಕಟ್ಟುನಿಟ್ಟಿನ ಕಣ್ಗಾವಲಿಗೆ 5 ಸಾವಿರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಪುಟಿನ್ ಅವರು ವಾಸ್ತವ್ಯ ಹೂಡುವ ಸ್ಥಳವನ್ನು ಗೌಪ್ಯವಾಗಿ ಇಡಲಾಗಿದೆ. ಪುಟಿನ್ ಆಗಮನದಿಂದ ಅವರು ವಾಪಸ್ ತೆರಳುವ ತನಕ ಪ್ರತಿ ಚಲನವಲನಗಳನ್ನು ಜಂಟಿ ಕಾರ್ಯಾಚರಣೆ ಬಹುಭದ್ರತಾ ಘಟಕಗಳಿಂದ ಟ್ರಾಕ್ ಮಾಡಲು ಪೊಲೀಸ್ ಇಲಾಖೆ ಮುಂದಾಗಿದೆ.

ಡ್ರೋನ್ ನಿಷೇಧ

ವಿವಿ ಐಪಿಗಳ ಸಂಚಾರಕ್ಕಾಗಿ ನಿಗದಿಪಡಿಸಿರುವ ಎಲ್ಲಾ ಮಾರ್ಗಗಳು ಮುಂಚಿತವಾಗಿಯೇ ಸುರಕ್ಷಿತಗೊಳಿಸಲಾಗಿದೆ. ಪ್ರಯಾಣಿಕರಿಗೆ ಅನಾನುಕೂಲ ತಪ್ಪಿಸಲು ಸಂಚಾರ ಸಲಹೆಗಳನ್ನು ನೀಡಲಾಗಿದೆ. ಈ ವೇಳೆ ಡ್ರೋನ್ ಹಾರಾಟವನ್ನು ನಿರ್ಬಂಧಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಪುಟಿನ್‌ಗೆ ವಿಶೇಷ ಔತಣಕೂಟ

ಭಾರತ, ರಷ್ಯಾ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ನವದೆಹಲಿ ಭೇಟಿ ಕೈಗೊಂಡಿರುವ ರಷ್ಯಾ ಅಧ್ಯಕ್ಷ ಪುಟಿನ್ ಅವರಿಗೆ ಪ್ರಧಾನಿ ನರೇಂದ್ರ ಮೋದಿಯವರು ವಿಶೇಷ ಔತಣಕೂಟವನ್ನು ಆಯೋಜಿಸಿದ್ದಾರೆ. ಪುಟಿನ್ ಅವರನ್ನು ಆತ್ಮೀಯವಾಗಿ ಸ್ವಾಗತಿಸಲು ಮೋದಿ ಸಜ್ಜಾಗಿದ್ದಾರೆ. ಬಳಿಕ ಅವರ ಜೊತೆ ಖಾಸಗಿ ಔತಣಕೂಟದಲ್ಲಿ ಭಾಗಿಯಾಗಲಿದ್ದಾರೆ.

# ಸಂಪುಟ ಸಭೆಯಲ್ಲಿಂದು ವಿವಾದಿತ ಕಾನೂನುಗಳ ಕುರಿತು ಚರ್ಚೆ

**ಬೆಂಗಳೂರು, ಡಿ.4–** ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ಕಾಯ್ದೆ, ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ತಿದ್ದುಪಡಿ ಕಾಯ್ದೆ, ಕರ್ನಾಟಕ ಸಾಮಾಜಿಕ ಬಹಿಷ್ಕಾರ ನಿಷೇಧ ಮತ್ತು ಪರಿಹಾರ ಕುರಿತ ಕಾನೂನುಗಳ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿಂದು ಮಹತ್ವದ ಚರ್ಚೆಗಳಾಗಿವೆ.

ಇದೇ ತಿಂಗಳ 8 ರಿಂದ ಬೆಳ ಗಾವಿಯಲ್ಲಿ ಆರಂಭವಾಗುವ ಚಳಿಗಾಲದ ಅಧಿವೇಶನದಲ್ಲಿ ವಿವಾದಿತ ಮಸೂದೆಗಳನ್ನು ಮಂಡಿಸಲು ತಯಾರಿಯಾಗಿದ್ದು, ಇಂದು ಸಂಪುಟದಲ್ಲಿ ಮಹತ್ವ ಚರ್ಚೆಗಳಾಗಿದೆ. ದ್ವೇಷ ಭಾಷಣ ಮತ್ತು ದ್ವೇ?ಷ ಅಪರಾಧಗಳ ಬಗ್ಗೆ ಕಠಿಣ ಕಾನೂನು ರೂಪಿಸಲಾಗಿದ್ದು, ಇದು ಬಹಳಷ್ಟು ಹಿಂದೂ ಸಂಘಟನೆಗಳು ಹಾಗೂ ಬಿಜೆಪಿ ಬೆಂಬಲಿತ ಪ್ರಮುಖರಿಗೆ ಮುಳುವಾಗುವ ಸಾಧ್ಯತೆ ಇದೆ. ಈ ಕಾಯ್ದೆಯ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆಗಳು ಭುಗಿಲೇಳುವ ನಿರೀಕ್ಷೆ ಇದೆ.

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿ ವಿಧೇಯಕ, ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ತಿದ್ದುಪಡಿ ವಿಧೇಯಕಗಳ ಬಗ್ಗೆಯೂ ಚರ್ಚೆಯಾಗಿದೆ. ವಿಧಾನ ಮಂಡಲದಲ್ಲಿ ಮಂಡನೆಗೆ ಈ ವಿಧೇಯಕಗಳನ್ನು ಅಂಗೀಕರಿಸುವ ಸಾಧ್ಯತೆ ಇದೆ.ಜಾನುವಾರುಗಳನ್ನು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ತಿದ್ದುಪಡಿ ವಿಧೇಯಕ ಮತ್ತೊಂದು ವಿವಾದ ಸೃಷ್ಟಿಸುವ ಅಂದಾಜುಗಳಿವೆ. ಈ ಹಿಂದೆ ಬಿಜೆಪಿ ಸರ್ಕಾರ ಗೋ ಹತ್ಯೆಗೆ ಕಡಿವಾಣ ಹಾಕಲು ಕಠಿಣ ಕಾನೂನನ್ನು ರೂಪಿಸಿತ್ತು. ಆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಲ್ಲದೆ, ಅಧಿಕಾರಕ್ಕೆ ಬಂದರೆ ಕಾನೂನನ್ನು ಸರಳೀಕರಣಗೊಳಿಸುವುದಾಗಿ ಪ್ರಣಾಳಿಕೆಯಲ್ಲಿ ಭರವಸೆ ನೀಡಿತ್ತು. ಅದರಂತೆ ಗೋ ಹತ್ಯೆ ಕ್ರಿಮಿನಲ್ ಅಪರಾಧವಾಗಿರುವುದನ್ನು ಸರಳೀಕರಣಗೊಳಿಸಲು ಸಂಪುಟದಲ್ಲಿ ಚರ್ಚಿಸಲಾಗಿದೆ.

ಬಿಜೆಪಿಯ ಮಹತ್ವಾಕಾಂಷೆಯ ಈ ವಿಧೇಯಕ್ಕಕ್ಕೆ ಕಾಂಗ್ರೆಸ್ ಸರ್ಕಾರ ವಿವಾದವನ್ನು ಕೆದಕುತ್ತಿದೆ ಪ್ರಸ್ತುತ ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಕೊಳ್ಳಿ ಇಡುವ ಮೂಲಕ ವಿವಾದವನ್ನು ಕೆಣಕುತ್ತಿದೆ.

ಅಧಿಕಾರ ಹಂಚಿಕೆಯ ವಿವಾದ ರಾಜ್ಯದಲ್ಲಿ ವ್ಯಾಪಕ ಚರ್ಚೆಯಾಗುತ್ತಿರುವ ಹಂತದಲ್ಲಿ ವಿವಾದಿತ ಕಾನೂನುಗಳನ್ನು ಮುನ್ನಡೆಗೆ ತರಲಾಗುತ್ತಿದೆ ಎಂಬ ಆರೋಪಗಳು ಕೇಳಿ ಬಂದಿವೆ.

ಉಳಿದಂತೆ ಬಯಲು ಸೀಮೆ ಪ್ರದೇಶ ಅಭಿವೃದ್ಧಿ ಮಂಡಳಿ, ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ, ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ, ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಸೇರಿದಂತೆ ಇತರ ಕಾನೂನುಗಳ ಬಗ್ಗೆ ಚರ್ಚೆ ನಡೆಸಲಾಗಿದೆ.2025 ನೇ ಸಾಲಿನಲ್ಲಿ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ನಡೆದಿದ್ದು, 100 ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣ ಖರ್ಚು ಮಾಡಲಾಗಿದೆ. ಅದಕ್ಕೆ ಸಂಪುಟದಲ್ಲಿ ಘಟನೋತ್ತರ ಅನುಮೋದನೆ ನೀಡಲಾಗಿದೆ.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಗಣಕೀಕರಣಕ್ಕಾಗಿ ಕೇಂದ್ರ ಸರ್ಕಾರದ ನೆರವು ಬಳಕೆಗೆ ಖಾಸಗಿ ಸಂಸ್ಥೆಗೆ ಗುತ್ತಿಗೆ ನೀಡುವ ಬಗ್ಗೆಯೂ ಚರ್ಚಿಸಲಾಗಿದೆ. ಕರ್ನಾಟಕ ಒಳನಾಡು ನೌಕೆ ನಿಯಮಗಳ ಬಗ್ಗೆ ವಿಚಾರ ವಿನಿಮಯ ನಡೆದಿದೆ.



ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಕಲಬುರಗಿ, ಗದಗ, ದಾವಣಗೆರೆ, ಮಂಗಳೂರು, ಬೆಂಗಳೂರಿನ ಕೆಂಗೇರಿ ಸಮೀಪ ಭೀಮನಕುಪ್ಪೆ ಹಾಗೂ ಮೈಸೂರಿನಲ್ಲಿ ಅತ್ಯಾಧುನಿಕ ಕೌಶಲ್ಯ ಪ್ರಯೋಗಾಲಯಗಳನ್ನು 452 ಕೋಟಿ ರೂಪಾಯಿಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸುವ ಬಗ್ಗೆ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ರಾಷ್ಟ್ರಿ?ಯ ಆರೋಗ್ಯ ಅಭಿಯಾನ ಯೋಜನೆಯಡಿ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಮಿತಿ ಆವರಣದಲ್ಲಿ 28 ಕೋಟಿ ರೂಪಾಯಿ ಖರ್ಚು ಮಾಡಿ ಕ್ರಿಟಿಕಲ್ ಕೇರ್ ಬ್ಲಾಕ್ ನಿರ್ಮಿಸಲು ಚರ್ಚಿಸಲಾಗಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ 19 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 304 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಚರ್ಚಿಸಲಾಗಿದೆ.

ಕುರಿ ಮತ್ತು ಮೇಕೆಗಳನ್ನು ಬಾಧಿಸುವ ನೀಲಿ ನಾಲಿಗೆ ರೋಗ ಹಾಗೂ ಇನ್ನಿತರ ರೋಗಗಳಿಗೆ ಲಸಿಕೆ ತಯಾರಿಸಲು ಹೆಬ್ಬಾಳದಲ್ಲಿರುವ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಯಲ್ಲಿ ಅತ್ಯಾಧುನಿಕ ಪ್ರಯೋಗಾಲಯ ಸ್ಥಾಪಿಸಲು 27 ಕೋಟಿ ರೂಪಾಯಿಗಳನ್ನು ಒದಗಿಸಲಾಗುತ್ತಿದೆ. ಬೆಂಗಳೂರಿನ ಸಜ್ಜೆಪಾಳ್ಯದಲ್ಲಿರುವ ನಿರಾಶ್ರಿತರ ಪರಿಹಾರ ಕೇಂದ್ರದ 03 ಎಕರೆ ಜಮೀನನ್ನು ನೆಫ್ರೊ ಯುರಾಲಜಿ ಸಂಸ್ಥೆಯ ಆಸ್ಪತ್ರೆ ನಿರ್ಮಾಣಕ್ಕಾಗಿ ಗುತ್ತಿಗೆ ಆಧಾರದ ಮೇಲೆ ನೀಡಲಾಗುತ್ತಿದೆ.

ಆಯುಷಾನ್ ಭಾರತ್ ಯೋಜನೆಯಡಿ 217 ಕೋಟಿ ರೂಪಾಯಿ ಖರ್ಚು ಮಾಡಿ 334 ಆಯುಷಾನ್ ಆರೋಗ್ಯ ಮಂದಿರಗಳನ್ನು ನಿರ್ಮಿಸಲು, 15ನೇ ಹಣಕಾಸು ಆಯೋಗದ ಅನುದಾನದಲ್ಲಿ 22 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಲು, ಜೊತೆಗೆ 80 ಕೋಟಿ ರೂಪಾಯಿ ವೆಚ್ಚದಲ್ಲಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಲು ಚರ್ಚಿಸಲಾಗಿದೆ.

ಫಾರ್ಮಸಿ ಡಿಪ್ಲೊಮೋ ತೇರ್ಗಡೆಯಾಗಿರುವ ಒಂದು ಸಾವಿರ ವಿದ್ಯಾರ್ಥಿಗಳನ್ನು ಮಂಜೂರಾಗಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ 11 ತಿಂಗಳ ಅವಧಿಯ ಟೈಫಂಡ್ ಆಧಾರದ ಮೇಲೆ ನೇಮಿಸಲು ಸಮತಿಸಲಾಗಿದೆ. 108 ಆರೋಗ್ಯ ಕವಚ ಸೇವೆಯಡಿಯಲ್ಲಿ ನೇಮಕಗೊಳ್ಳಲಿರುವ ತುರ್ತು ವೈದ್ಯಕೀಯ ಸಿಬ್ಬಂದಿ ಮತ್ತು ಚಾಲಕರಿಗೆ ಕನಿಷ್ಠ ವೇತನ ದರದಲ್ಲಿ ಮೂಲವೇತನ ನಿಗದಿ ಮಾಡುವುದು ಹಾಗೂ ಹಿಂದಿನ ಸೇವಾ ಅನುಭವ ಆದರೆ ಪ್ರತಿ ವರ್ಷಕ್ಕೆ ಶೇಕಡ ಒಂದರಷ್ಟು , ಗರಿಷ್ಠ 15 ವರ್ಷಗಳ ಅವಧಿಗೆ ಶೇ.15ರಷ್ಟು ಕಾರ್ಯಕ್ಷಮತೆ ವೇತನ ಹಾಗೂ ಶೇಕಡ 10 ರಷ್ಟು ಪ್ರೊತ್ಸಾಹ ಧನ ನೀಡಲು ಚರ್ಚಿಸಲಾಗಿದೆ.ಹುಬ್ಬಳ್ಳಿಯ ಕುಸುಗಲ್ಲ ಗ್ರಾಮದಲ್ಲಿ ಕಾಂಗ್ರೆಸ್ ಭವನ ನಿರ್ಮಾಣಕ್ಕೆ ನಿವೇಶನ ನೀಡಲು ನಿರ್ಧರಿಸಲಾಗಿದೆ.

## ಸಿರವಾರ ಪ್ರಾಥಮಿಕ ಪತ್ತಿನ ಸಹಕಾರ ಸಂಘದ ಚುನಾವಣೆ

# ಪ್ರತಿಷ್ಠೆಗೆ ತೆಗೆದುಕೊಂಡ ಕಾಂಗ್ರೆಸ್, ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ



ಯುವಮಾರ್ಗ ಸುದ್ದಿ

**ಸಿರವಾರ, ಡಿ.04–**ಸಿರವಾರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದ ನಿರ್ದೇಶಕರ ಸ್ಥಾನಗಳಿಗೆ ಚುನಾವಣೆಗೆ ಡಿಸೆಂಬರ್7 ರಂದು ಮತದಾನ ನಡೆಯಲಿದ್ದು ಕಾಂಗ್ರೆಸ್ ತಮ್ಮದೇ ಫೆನಾಲ್ ಮಾಡಿಕೊಂಡಿದ್ದು ಈ ಚುನಾವಣೆಯನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿದೆ, ಬುಧವಾರ ಬೆಳಿಗ್ಗೆ ಕಾಂಗ್ರೆಸ್ ಮುಖಂಡರು ಪಟ್ಟಣದ ವಿವಿಧ ವಾರ್ಡುಗಳಲ್ಲಿ ಬಿರುಸಿನ ಪ್ರಚಾರ ನಡೆಸಿದರು.

ನಿರ್ದೇಶಕರ ಸ್ಥಾನಗಳ ಅಭ್ಯರ್ಥಿಗಳಾದ ರಮೇಶ ದರ್ಶನಕರ್, ಸೂರಿ ದುರುಗಣ್ಣ ಅವರ ತಾಯಿ, ಶಿವರಾಜ ಬೆಳವಿನೂರು, ತಿಮ್ಮಣ್ಣ ಕಟ್ಟಿಮನಿ, ಸವಾರೆಪ್ಪ, ಎನ್.ಮಲ್ಲಪ್ಪ ಸೇರಿ 11 ಜನ ನಿರ್ದೇಶಕರ ಸ್ಥಾನಗಳಿಗೆ ಸ್ಪರ್ಧೆ ಮಾಡಿದ ಅಭ್ಯರ್ಥಿಗಳ ಪರ ಮತ ಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಬ್ರಿಜೇಶ್ ಪಾಟೀಲ್, ಮುಖಂಡರಾದ ಚುಕ್ಕಿ ಸೂಗಪ್ಪ ಸಾಹುಕಾರ್, ಅರಕೇರಿ ಶಿವಶರಣ ಸಾಹುಕಾರ್, ಎಂ.ಶ್ರೀನಿವಾಸ, ಚುಕ್ಕಿ ಉಮಾಪತಿ ಸಾಹುಕಾರ್, ಹಸೇನ ಅಲಿ, ಜೆ.ಅಬ್ರಹಾಂ, ಹೆಚ್.ಮಾರ್ಕಪ್ಪ, ಹೆಚ್.ಕೆ.ಅಮರೇಶ, ಕಲ್ಲೂರು ಬಸವರಾಜ ನಾಯಕ, ಮೌಲಾಸಾಬ ವರ್ಚಸ್, ಹಾಜೀ ಚೌದ್ರೀ, ಚನ್ನಪ್ಪ ಗಡ್ಲ, ಮಲ್ಲಪ್ಪ ಕಜ್ಜಿ, ಮನೋಹರ್, ಶವಗೇನಿ, ಕೆ.ರಾಘವೇಂದ್ರ, ಗಡ್ಲ ಚನ್ನಪ್ಪ ನಾಯಕ, ಡಿ.ಜಯಪ್ಪ, ಇರ್ಫಾನ್ ಬಡೇಗರ್, ರಫೀ, ರಂಗನಾಥ ನಾಯಕ ಸೇರಿದಂತೆ ಅನೇಕರು ಇದ್ದರು.

# ಪತ್ನಿ ಕೊಂದು ಬಿಎಂಟಿಸಿ ನಿವೃತ್ತ ಚಾಲಕ ಆತ್ಮಹತ್ಯೆ



**ಬೆಂಗಳೂರು,ಡಿ.4–**ಪಾರ್ಶವಾಯು ಪೀಡಿತರಾಗಿ ವ್ಹೀಲ್‌ಚೇರ್‌ನಲ್ಲೇ ಇರುವಂತಾಗಿದ್ದ ಪತ್ನಿಯನ್ನು ಕ್ರೂರವಾಗಿ ಕೊಲೆ ಮಾಡಿದ ಬಿಎಂಟಿಸಿಯ ನಿವೃತ್ತ ಚಾಲಕರೊಬ್ಬರು ತಾವೂ ಆತ್ಮಹತ್ಯೆಗೆ ಶರಣಾದ ದಾರುಣ ಘಟನೆ ಸುಬ್ರಮಣ್ಯಪುರದ ಚಿಕ್ಕಗೌಡನಪಾಳ್ಯದಲ್ಲಿ ನಡೆದಿದೆ.

ಬಿಎಂಟಿಸಿಯ ನಿವೃತ್ತ ಚಾಲಕ ವೆಂಕಟೇಶನ್ (65) ಅವರು ಮೊನ್ನೆ ರಾತ್ರಿ ಪತ್ನಿ ಬೇಬಿ (65) ಅವರನ್ನು ಕೊಂದು ಬಳಿಕ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಬೇಬಿ ಅವರು ಕೆಲ ತಿಂಗಳ ಹಿಂದೆ ಪಾರ್ಶವಾಯು ಪೀಡಿತರಾಗಿ ವ್ಹೀಲ್‌ಚೇರ್ ಆಶ್ರಯಿಸಿದ್ದರು. ದಂಪತಿಗಳಿಗೆ ಇಬ್ಬರು ಮಕ್ಕಳಿದ್ದು, ಮಕ್ಕಳು ಕೆಲಸದ ನಿಮಿತ್ತ ಮನೆಯ ಹೊರಗಡೆ ಇದ್ದಾಗ ಘಟನೆ ನಡೆದಿದೆ.

ಮಕ್ಕಳು ಕೆಲಸಕ್ಕೆ ಹೋಗಿದ್ದಾಗ ದಂಪತಿ ಸಣ್ಣಪುಟ್ಟ ವಿಚಾರಕ್ಕೂ ಜಗಳವಾಡುತ್ತಿದ್ದರು. ಕಳೆದ ನವೆಂಬರ್ 2ರಂದು ಮಕ್ಕಳು ಸೊಸೆ ಕೆಲಸಕ್ಕೆ ಹೋದ ಬಳಿಕ ವೃದ್ಧ ದಂಪತಿಯ ನಡುವೆ ಜಗಳವಾಗಿದೆ.

ಜಗಳ ವಿಕೋಪಕ್ಕೆ ತಿರುಗಿ ಆಕ್ರೋಶಗೊಂಡ ವೆಂಕಟೇಶನ್ ಬಟ್ಟೆ ಒಣಗಿಸುವ ವೈರ್‌ನಿಂದ ಪತ್ನಿಯ ಕುತ್ತಿಗೆ ಬಿಗಿದು ಕೊಲೆ ಮಾಡಿದ್ದಾರೆ. ಬಳಿಕ ಅದೇ ವೈರ್ ಬಳಸಿ ತಾನೂ ನೇಣು ಬಿಗಿದು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂಬುದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ.

ಮಧ್ಯಾಹ್ನ ಸೊಸೆ ಮನೆಗೆ ಬಂದು ನೋಡಿದಾಗ ಮನೆಯಲ್ಲಿ ಮೃತದೇಹಗಳು ಕಾಣಿಸಿವೆ. ತಕ್ಷಣವೇ ಸುಬ್ರಮಣ್ಯಪುರ ಪೊಲೀಸ್ ಠಾಣೆಗೆ ಮಾಹಿತಿ ನೀಡಲಾಗಿದೆ. ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

# ವಿಚ್ಛೇದಿತ ಮುಸ್ಲಿಂ ಮಹಿಳೆಗೆ ವರದಕ್ಷಿಣೆ ವಾಪಸ್ ಪಡೆಯುವ ಹಕ್ಕಿದೆ

**ನವದೆಹಲಿ, ಡಿ.4:–** ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿ, ವಿಚ್ಛೇದಿತ ಮುಸ್ಲಿಂ ಮಹಿಳೆ ಮದುವೆಯ ಸಮಯದಲ್ಲಿ ತನ್ನ ಪೊಷಕರು ಅಥವಾ ಸಂಬಂಧಿಕರು ನೀಡಿದ ನಗದು, ಚಿನ್ನ, ಆಭರಣಗಳು ಮತ್ತು ಇತರ ವಸ್ತುಗಳನ್ನು ಹಿಂದಿರುಗಿಸುವ ಸಂಪೂರ್ಣ ಕಾನೂನುಬದ್ಧ ಹಕ್ಕನ್ನು ಹೊಂದಿದ್ದಾರೆ ಎಂದು ಸ್ಪಷ್ಟಪಡಿಸಿದೆ.

ಈ ಎಲ್ಲಾ ವಸ್ತುಗಳನ್ನು ಮಹಿಳೆಯ ವೈಯಕ್ತಿಕ ಆಸ್ತಿ ಎಂದು ಪರಿಗಣಿಸಲಾಗುತ್ತದೆ ಮತ್ತು ವಿಚ್ಛೇದನದ ನಂತರ ಅವಳಿಗೆ ಹಿಂತಿರುಗಿಸಬೇಕು ಎಂದು ನ್ಯಾಯಾಲಯ ತೀರ್ಪು ನೀಡಿದೆ.

ನ್ಯಾಯಮೂರ್ತಿಗಳಾದ ಸಂಜಯ್ ಕರೋಲ್ ಮತ್ತು ಎನ್. ಕೋಟಿಶ್ವರ್ ಸಿಂಗ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠವು, ಮುಸ್ಲಿಂ ಮಹಿಳೆಯರ (ವಿಚ್ಛೇದನದ ಹಕ್ಕುಗಳ ರಕ್ಷಣೆ) ಕಾಯ್ದೆ, 1986 ಅನ್ನು ವ್ಯಾಖ್ಯಾನಿಸುವಾಗ ಸಮಾನತೆ, ಘನತೆ ಮತ್ತು ಸ್ವಾಯತ್ತತೆಯಂತಹ ಸಾಂವಿಧಾನಿಕ ಮೌಲ್ಯಗಳು ಅತ್ಯುನ್ನತವಾಗಿರಬೇಕು ಎಂದು ಅಭಿಪ್ರಾಯಪಟ್ಟಿದೆ. ಕಾನೂನನ್ನು ಕೇವಲ ಸಾಮಾನ್ಯ ನಾಗರಿಕ ವಿವಾದವಾಗಿ ನೋಡಬಾರದು, ಆದರೆ ಮಹಿಳೆಯರ ನಿಜವಾದ ಸಾಮಾಜಿಕ ಸಂದರ್ಭಗಳನ್ನು ಅರ್ಥಮಾಡಿಕೊಳ್ಳುವ ಮೂಲಕ ಅನ್ವಯಿಸಬೇಕು, ವಿಶೇಷವಾಗಿ ಪಿತೃಪ್ರಧಾನ ತಾರತಮ್ಯ ಇನ್ನೂ ಸಾಮಾನ್ಯವಾಗಿರುವ ಪ್ರದೇಶಗಳಲ್ಲಿ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಭಾರತದ ಸಂವಿಧಾನವು ಎಲ್ಲರಿಗೂ ಸಮಾನತೆಯನ್ನು ಕಲ್ಪಿಸುತ್ತದೆ, ಇದು ನ್ಯಾಯಾಲಯಗಳು ಸಾಮಾಜಿಕ ನ್ಯಾಯ ಆಧಾರಿತ ತೀರ್ಪುಗಳ ಮೂಲಕ ಅನುಸರಿಸಬೇಕಾದ ಆಶಯವಾಗಿದೆ ಎಂದು ಪೀಠ ಒತ್ತಿ ಹೇಳಿದೆ.

ನ್ಯಾಯಾಲಯವು 1986 ರ ಕಾಯ್ದೆಯ ಸೆಕ್ಷನ್ 3 ಉಲ್ಲೇಖಿಸಿದೆ, ಇದು ವಿಚ್ಛೇದಿತ ಮುಸ್ಲಿಂ ಮಹಿಳೆಗೆ ಮದುವೆಗೆ ಮೊದಲು, ಸಮಯದಲ್ಲಿ ಅಥವಾ ನಂತರ ಆಕೆಯ ಪೊಷಕರು, ಸಂಬಂಧಿಕರು, ಸ್ನೇಹಿತರು ಅಥವಾ ಪತಿಯಿಂದ ನೀಡಲಾದ ಎಲ್ಲಾ ಉಡುಗೊರೆಗಳು, ನಗದು, ಚಿನ್ನ ಮತ್ತು ಆಸ್ತಿಗಳಿಗೆ ಕಾನೂನುಬದ್ಧವಾಗಿ ಅರ್ಹಳಾಗಿದ್ದಾಳೆ ಮತ್ತು ವಿಚ್ಛೇದನದ ನಂತರ ಅವುಗಳನ್ನು ಅವಳಿಗೆ ಹಿಂತಿರುಗಿಸಬೇಕು ಎಂದು ಸ್ಪಷ್ಟವಾಗಿ ಹೇಳುತ್ತದೆ.

ಸುಪ್ರೀಂ ಕೋರ್ಟನ ಈ ತೀರ್ಪು ಕೇವಲ ಕಾನೂನು ವ್ಯಾಖ್ಯಾನವಲ್ಲ, ಸಮಾಜದಲ್ಲಿ ಮಹಿಳಾ ಹಕ್ಕುಗಳನ್ನು ಬಲಪಡಿಸುವಲ್ಲಿ ಒಂದು ಹೆಜ್ಜೆಯಾಗಿದೆ. ಈ ತೀರ್ಪು ಗಮನಾರ್ಹ ಪರಿಹಾರವಾಗಲಿದೆ, ವಿಶೇಷವಾಗಿ ವಿವಾಹಿತ ಮುಸ್ಲಿಂ ಮಹಿಳೆಯರಿಗೆ, ವಿವಾಹದ ಸಮಯದಲ್ಲಿ ಸಂಪಾದಿಸಿದ ಆಸ್ತಿಯನ್ನು ಮರುಪಡೆಯುವಲ್ಲಿ ಆಗಾಗ್ಗೆ ಅಡೆತಡೆಗಳನ್ನು ಎದುರಿಸಬೇಕಾಗುತ್ತದೆ.

ಮುಸ್ಲಿಂ ಮಹಿಳೆಯೊಬ್ಬರ ಅರ್ಜಿಯನ್ನು ಸ್ವೀಕರಿಸಿದ ಸುಪ್ರೀಂ ಕೋರ್ಟ್, ಆಕೆಯ ಮಾಜಿ ಪತಿಗೆ 17,67,980 ಅನ್ನು ಆಕೆಯ ಬ್ಯಾಂಕ್ ಖಾತೆಗೆ ವರ್ಗಾಯಿಸಲು ನಿರ್ದೇಶನ ನೀಡಿದೆ. ಈ ಮೊತ್ತವನ್ನು ಮೆಹರ್ (ವರದಕ್ಷಿಣೆ), ವರದಕ್ಷಿಣೆ, 30 ಭೋರಿ (ಟೋಲಾ) ಚಿನ್ನದ ಆಭರಣಗಳು ಮತ್ತು ರೆಫ್ರಿಜರೇಟರ್, ಟೆಲಿವಿಷನ್, ಸ್ಟೆಬಿಲೈಜರ್, ಶೋಕೇಸ್, ಬಾಕ್ಸ್ ಬೆಡ್ ಮತ್ತು ಊಟದ ಪೀಠೋಪಕರಣಗಳಂತಹ ಗೃಹೋಪಯೋಗಿ ವಸ್ತುಗಳು ಸೇರಿದಂತೆ ಇತರ ಉಡುಗೊರೆಗಳಾಗಿ ಲೆಕ್ಕಹಾಕಲಾಗಿದೆ.



ಆರು ವಾರಗಳ ಒಳಗೆ ಪಾವತಿಯನ್ನು ಅನುಸರಣೆಯ ಅಫಿಡವಿಟ್ ಜೊತೆಗೆ ಮಾಡಬೇಕೆಂದು ಸುಪ್ರೀಂ ಕೋರ್ಟ್ ನಿರ್ದೇಶಿಸಿದೆ. ಸಮಯಕ್ಕೆ ಸರಿಯಾಗಿ ಪಾವತಿ ಮಾಡದಿದ್ದರೆ, ಪತಿ ವಾರ್ಷಿಕ ಶೇಕಡಾ 9 ರಷ್ಟು ಬಡ್ಡಿಯನ್ನು ಪಾವತಿಸಬೇಕಾಗುತ್ತದೆ ಎಂದು ಪೀಠ ಸ್ಪಷ್ಟಪಡಿಸಿದೆ. ಕಲ್ಕತ್ತಾ ಹೈಕೋರ್ಟನ 2022 ರ ತೀರ್ಪನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿದೆ.

ಯುವ ಮಾರ್ಗ

ಶುಕ್ರವಾರ: 05-12-2025

## ಡಿ. 6 ರಿಂದ 10ರವರೆಗೆ ಕೃಷಿ ವಿವಿಯಲ್ಲಿ ಕ್ರೀಡಾ ಪಂದ್ಯಾವಳಿಗಳ ಆಯೋಜನೆ

**ರಾಯಚೂರು,ಡಿ.4–** ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಡಿಸೆಂಬರ್ 6 ರಿಂದ 10ರವರೆಗೆ 5 ದಿನಗಳ ಅವಧಿಯ ಅಂತರ–ಮಹಾವಿದ್ಯಾಲಯಗಳ ಗುಂಪು ಕ್ರೀಡಾ ಪಂದ್ಯಾವಳಿಗಳನ್ನು ಆಯೋಜಿಸಲಾಗಿದೆ.

ಪಂದ್ಯಾವಳಿಯಲ್ಲಿ ವಾಲಿಬಾಲ್ (ಪುರುಷ ಮತ್ತು ಮಹಿಳೆಯರು), ಖೋ–ಖೋ (ಪುರುಷ ಮತ್ತು ಮಹಿಳೆಯರು), ಟೇಬಲ್ ಟೆನ್ನಿಸ್ (ಪುರುಷ ಮತ್ತು ಮಹಿಳೆಯರು), ಕಬಡ್ಡಿ (ಪುರುಷರು) ಹೀಗೆ ಗುಂಪು ಪಂದ್ಯಾವಳಿಗಳನ್ನು ಆಯೋಜಿಸಲಾಗಿದೆ.

ಗುಂಪು ಕ್ರೀಡಾ ಪಂದ್ಯಾವಳಿಗಳಿಗೆ ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಪತಿಗಳಾದ ಡಾ. ಎಂ. ಹನುಮಂತಪ್ಪರವರು ಡಿಸೆಂಬರ್ 6 ರಂದು ಚಾಲನೆ ನೀಡುವರು.

ಈ ಪಂದ್ಯಾವಳಿಗಳಲ್ಲಿ ಕೃಷಿ ಮಹಾವಿದ್ಯಾಲಯ ರಾಯಚೂರು, ಭೀಮರಾಯನಗುಡಿ, ಕಲಬುರಗಿ, ಗಂಗಾವತಿ, ಹಗರಿ, ಕೃಷಿ ತಾಂತ್ರಿಕ ಮಹಾವಿದ್ಯಾಲಯ ರಾಯಚೂರು ಹಾಗೂ ರಾಯಚೂರಿನ ಕೃಷಿ ಸ್ನಾತಕೋತ್ತರ ಅಧ್ಯಯನ ವಿಭಾಗಗಳನ್ನೊಳಗೊಂಡಂತೆ 320 ವಿದ್ಯಾರ್ಥಿಯರು ಹಾಗೂ 200 ವಿದ್ಯಾರ್ಥಿನಿಯರು ಭಾಗವಹಿಸುವರು.

ಈ ಕ್ರೀಡಾಕೂಟವನ್ನು ರಾಯಚೂರಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯವು ಆಯೋಜಿಸುತ್ತಿದೆ ಎಂದು ವಿಶ್ವವಿದ್ಯಾಲಯವು ಪ್ರಕಟಣೆಯಲ್ಲಿ ತಿಳಿಸಿದೆ.

## ಎಸ್ಡಿಎಂಸಿ ಅಧ್ಯಕ್ಷರಾಗಿ ಶರಣಯ್ಯ ಸ್ವಾಮಿ ಆಯ್ಕೆ

ಯುವಮಾರ್ಗ ಸುದ್ದಿ



**ಅರಕೇರಾ,ಡಿ.4–** ತಾಲೂಕಿನ ಶಿವಂಗಿ ಸರ್ಕಾರಿ ಪ್ರೌಢ ಶಾಲೆಯಲ್ಲಿ ಗುರುವಾರ ನೂತನ ಎಸ್ಡಿಎಂಸಿ ರಚನೆ ಮಾಡಲಾಯಿತು.

ಅಧ್ಯಕ್ಷರಾಗಿ ಶರಣಯ್ಯ ಸ್ವಾಮಿ ಹಿರೇಮಠ, ಸದಸ್ಯರಾಗಿ ದೇವಮ್ಮ ನಿಂಗಪ್ಪ, ಲಕ್ಷ್ಮೀ ಮಲ್ಲಪ್ಪ, ದೇವಮ್ಮ ಗೋಪಾಲ, ಶಿವಪ್ಪ ಕಾವಲಿ, ಸಿದ್ದಲಿಂಗ ಆರಗಲ್, ಅಕ್ಬರ್ ಹುಸೇನ್ ಮಕಾಶಿ, ಅರ್ಜುನ ಮಕಾಶಿ, ಕಾಸೀಂ ಸಾಬ ಆಯ್ಕೆಯಾಗಿದ್ದಾರೆ ಎಂದು ಮುಖ್ಯ ಶಿಕ್ಷಕ ಶಿವಜಾತಪ್ಪ ತಿಳಿಸಿದರು.

## ಚಿತ್ರೀಕರಣ ವೇಳೆ ಹೃದಯಾಘಾತದಿಂದ ನಿರ್ದೇಶಕ ಸಂಗೀತ್ ಸಾಗರ್ ನಿಧನ



**ತೀರ್ಥಹಳ್ಳಿ,ಡಿ.4–**ಸಿನಿಮಾ ಚಿತ್ರೀಕರಣ ವೇಳೆ ಹೃದಯಾಘಾತದಿಂದ ನಿರ್ದೇಶಕ ಸಂಗೀತ್ ಸಾಗರ್ ಸಾವನ್ನಪ್ಪಿದ್ದಾರೆ.ಪಾತ್ರಧಾರಿ ಸಿನಿಮಾದ ಚಿತ್ರಿ?ಕರಣ ನಡೆಸುತ್ತಿದ್ದ ವೇಳೆ ಹರಿಹರಪುರದಲ್ಲಿ ಈ ಘಟನೆ ನಡೆದಿದೆ.

ಸಕಲೇಶಪುರದ ದೊಡ್ಡನಾಗರ ಮೂಲದ ಸಂಗೀತ್ ಸಾಗರ್ ಚಿತ್ರರಂಗದಲ್ಲಿ ಹೊಸ ಭರವಸೆ ಮೂಡಿಸಿದ್ದರು ಎಂಟಕ್ಕೂ ಹೆಚ್ಚು ಕನ್ನಡ ಚಿತ್ರಗಳನ್ನು ನಿರ್ದೇಶಿಸಿದ್ದರು.ಹಾಸ್ಯ ಸನ್ನಿವೇಶ ಚಿತ್ರಿ?ಕರಣ ಸಂದರ್ಭದಲ್ಲಿ ಅಸ್ವಸ್ಥಗೊಡು ಕುಸಿದುಬಿದ್ದರು.ತಕ್ಷಣ ಅವರನ್ನು ಕೊಪ್ಪ ಆಸ್ಪತ್ರೆಗೆ ದಾಖಲಿದಲಾಗಿತ್ತು ಆದರೆ ಹೆಚ್ಚಿನ ಚಿಕಿತ್ಸೆಗೆ ಶಿವಮೊಗ್ಗದ ಖಾಸಗಿ ಆಸ್ಪತ್ರೆಗೆ ಕರೆತಂದು ಚಿಕಿತ್ಸೆ ನೀಡುವಾಗ ಕೊನೆಯುಸಿರೆಳೆದಿದ್ದಾರೆ.

ಪಾತ್ರಧಾರಿ ಸಿನಿಮಾದ ಸಿನಿಮಾದ ನಿರ್ದೇಶಕ ಹಾಗೂ ಸಂಗೀತ ನಿರ್ದೇಶಕರಾಗಿ ಸಂಗೀತ್ ಸಾಗರ್ ಕೆಲಸ ಮಾಡುತ್ತಿದ್ದರು.ಕಳೆದ 20 ದಿನಗಳಿಂದ ಹರಿಹರಪುರ, ತೀರ್ಥಹಳ್ಳಿ ತಾಲೂಕು ಸುತ್ತಮುತ್ತ ಸಿನಿಮಾ ಚಿತ್ರಿ?ಕರಣ ನಡೆಯುತ್ತಿತ್ತು. ನಾಳೆ ಕುಂಬಳಕಾಯಿ ಶಾಸ್ತ್ರ ಮಾಡಿ ಚಿತ್ರಿ?ಕರಣ ಕೊನೆಗೊಳ್ಳಬೇಕಿತ್ತು.ಸಾಗರ್ ಅಕಾಲಿಕ ನಿಧನಕ್ಕೆ ಸಿನಿಮಾ ತಂಡ ಆಘಾತ ವ್ಯಕ್ತಪಡಿಸಿದೆ.

# ರಾಯಚೂರು ತಾಪಂ ಕಚೇರಿಗೆ ಜಿಪಂ ಸಿಇಓ ದಿಢೀರ್ ಭೇಟಿ; ಪರಿಶೀಲನೆ

ಯುವಮಾರ್ಗ ಸುದ್ದಿ

**ರಾಯಚೂರು,ಡಿ.4–**ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕಾಂದೂ ಅವರು ರಾಯ ಚೂರು ತಾಲೂಕ ಪಂಚಾಯತಿ ಕಚೇರಿಗೆ ಡಿಸೆಂಬರ್ 3ರಂದು ಮಧ್ಯಾಹ್ನ ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು.

ಅಲ್ಲಿನ ಆಡಳಿತ ಶಾಖೆ, ನರೇಗಾ ಶಾಖೆಗೆ ತೆರಳಿ ವೀಕ್ಷಣೆ ನಡೆಸಿ ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡರು. ನಂತರ ಕಾರ್ಯನಿರ್ವಾಹಕ ಅಧಿಕಾರಿಯವರ ಚೇಂಬರ್‌ಗೆ ತೆರಳಿ ತಾಲೂಕ ಪಂಚಾಯತಿ ಕಾರ್ಯಾಲಯದ ಕಾರ್ಯವೈಖರಿಯ ಬಗ್ಗೆ ಪರಿಶೀಲಿಸಿದರು.

ನಂತರ ಸಾಮಾರ್ಥ್ಯ ಸೌಧಕ್ಕೆ ಭೇಟಿ ನೀಡಿ, ಎನ್‌ಆರ್ ಎಲ್‌ಎಂ ಸಿಬ್ಬಂದಿಯವರೊಂದಿಗೆ ಮಾತನಾಡಿ ಮಾಹಿತಿ ಪಡೆದರು. ನಂತರ ಅಕ್ಷರ ದಾಸೋಹ ಶಾಖೆಗೆ ಭೇಟಿ ನೀಡಿ ಪರಿಶೀಲಿಸಿದರು. ಸಾಮರ್ಥ್ಯ ಸೌಧದಲ್ಲಿ ಸ್ವಚ್ಚತೆಯನ್ನು ಕಾಪಾಡಲು



ಸಂಬಂಧಿಸಿದ ಸಿಬ್ಬಂದಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ನರೇಗಾ ಸಹಾಯಕ ನಿರ್ದೇಶಕರಾದ ಹನುಮಂತ, ಪಂಚಾಯತ್ ರಾಜ್‌ನ ಸಹಾಯಕ ನಿರ್ದೇಶಕರಾದ ಶಿವಪ್ಪ ಹಾಗೂ ಕಚೇರಿಯ ಸಿಬ್ಬಂದಿ ಹಾಜರಿದ್ದರು.

# ಇಂದು ನೆನಪಿಗೆ ವ್ಯಾಯಾಮ ಮತ್ತು ಸೋತು ಗೆದ್ದ ಸಾಧಕರಿವರು ವಿದ್ಯಾರ್ಥಿಗಳಿಗೆ ಪ್ರೇರಣಾ ಕಾರ್ಯಗಾರ

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.4–** ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆ ಆವರಣದಲ್ಲಿ ಡಿ.5 ರಂದು ಬೆ.10ಕ್ಕೆ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ , ಹಾಗೂ ಮಾಧ್ಯಮ ಸಮಿತಿ, ಸೃಜನಾ ಫೌಂಡೇಶನ್ – ಭಾರತೀಯ ವೈದ್ಯಕೀಯ ಸಂಘ ಸಿರುಗುಪ್ಪ, ಸಂಯು ಕ್ತಾಶ್ರಯದಲ್ಲಿ ನೆನಪಿಗೆ ವ್ಯಾಯಾಮ ಮತ್ತು ಸೋತು ಗೆದ್ದ ಸಾಧಕರಿವರು ವಿದ್ಯಾರ್ಥಿಗಳಿಗೆ ಪ್ರೇರಣಾ ತರಗತಿಯ ಕಾರ್ಯ ಕ್ರಮದ ದಿವ್ಯಾಸಾನಿಧ್ಯವನ್ನು ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದು ಡಾ. ಮಧು ಸೂಧನ್ ಕಾರಿಗನೂರು ಶಸ್ತ್ರವೈದ್ಯರು ಸಿರುಗುಪ್ಪ, ನರಸಿಂಹ ಮೂರ್ತಿ ಹಾಸ್ಯ ಕಲಾವಿದರು, ಎಸ್.ಎಂ.ಹಿರೇಮಠ ವಿಜ್ಞಾನ ಶಿಕ್ಷಕರು ಬಳ್ಳಾರಿ, ಪಕ್ಷಿಗಳ ಕುರಿತು ಸಲ್ಲಾವುದಿನ್ ಪಕ್ಷಿ ಪ್ರೇಮಿ ರವರು ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ನೀಡಲಿ ದ್ದಾರೆ.ಕಾರ್ಯಕ್ರಮ ವನ್ನು ಕೆ.ಪಿ.ಎಸ್. ವಿ.ಎಸ್.ಅಯುರ್ವೇ ದಿಕ್ ಮೆಡಿಕಲ್ ಕಾಲೇಜಿನ ಮತ್ತು ಆಸ್ಪತ್ರೆಯ ಪ್ರಾಚಾರ್ಯರಾದ ಡಾ.ಜೀ ವನೇಶ್ವರಯ್ಯ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆ ಯನ್ನು ನೇತಾಜಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಕೆ.ವಿಜ ಯಲಕ್ಷ್ಮೀ ವಹಿಸಲಿದ್ದಾರೆ. ಪ್ರಾಸ್ಥವಿಕ ನುಡಿ ತಾಯಪ್ಪ ಬಿ.ಹೊಸುರುರವರಿಂದ ಮುಖ್ಯ ಅತಿಥಿಗಳಾಗಿ ತಾಲೂಕು ಕ.ಸಾ.ಪ. ಅಧ್ಯಕ್ಷರಾದ ಶರಣಬಸವ ನೀರಮಾನ್ವಿ, ಕೆ.ರಾಜ ರವಿವರ್ಮ, ಅ.ಖಿ.ಭಾ.ವೀ.ಲಿಂ.ಮಹಾಸಭಾ ಮಾನ್ವಿ ತಾ. ಅಧ್ಯಕ್ಷರಾದ ಅರುಣ್ ಚಂದಾ ಹಾಗೂ ಮಾಧ್ಯಮ ಸಮಿತಿಯ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಅ.ಖಿ.ಭಾ. ವೀ.ಲಿಂ.ಮಹಾಸಭಾ ಮಾಧ್ಯಮ ಸಮಿತಿಯ ತಾ.ಅಧ್ಯಕ್ಷರಾದ ರಾಜಶೇಖರಸ್ವಾಮಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಲೊಯೋಲ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಜಾನಪದ ಜಾತ್ರೆ

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.4–** ಪಟ್ಟಣದ ಲೊಯೋಲ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ನಡೆದ 'ಜಾನಪದ ಜಾತ್ರೆ ಕಾರ್ಯಕ್ರಮಕ್ಕೆ ಕಾಲೇಜಿನ ಪ್ರಾಚಾರ್ಯರಾದ ಫಾ.ವಿನೋದ್ ಪೌಲ್ ಚಾಲನೆ ನೀಡಿ ಮಾತನಾಡಿ ಜನಪದರ ಮೌಖಿಕ ಸಾಹಿತ್ಯ ಇಂದಿಗೂ ಕೂಡ ಗ್ರಾಮೀ ಣರಲ್ಲಿ ಜೀವಂತವಾಗಿ ಉಳಿದಿರು ವುದಕ್ಕೆ ಅವರ ಜೀವನ, ಪ್ರೀತಿ, ನಡೆ, ನುಡಿ, ತ್ಯಾಗ, ಬಲಿದಾನ ಆದರ್ಶ ಪ್ರಾಯವಾಗಿದೆ. ಹಾಗೂ ಇಂದಿನ ಅಧುನಿಕ ಕಾಲದಲ್ಲಿಯು ಕೂಡ ದಿನನಿತ್ಯದ ಚಟು ವಟಿಕೆಗಳು, ಕೌಟುಂಬಿಕ ಸಂಬಂಧಗಳು, ದೇವರುಗಳ ಉಪಾಸನೆ ಜಗತ್ತಿಗೆ ಮಾದರಿಯಾಗಿವೆ. ಜನಪದರು ಅಕ್ಷರ ಲೋಕದ ಬಗ್ಗೆ ಅರಿವಿರದ ನಕ್ಷತ್ರಗಳಾಗಿ ಬೆಳಗುತ್ತಿದ್ದಾರೆ ಎಂದು ತಿಳಿಸಿದರು.

ಕಾಲೇಜು ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಕಾಲೇಜಿನ ಉಪನ್ಯಾಸಕರಾದ ಭಾಗ್ಯ ಮಾತನಾಡಿ ನಮ್ಮ ಜನಪದರ ಆಚರಣೆಗಳು ಮತ್ತು ಅವರ ಸಂಸ್ಕೃತಿಗಳನ್ನು ಕಾಲೇಜು ವಿದ್ಯಾರ್ಥಿಗಳಿಗೆ ಪರಿಚಯಿಸುವ ಉದ್ದೇಶದಿಂದ 'ಜಾನಪದ ಜಾತ್ರೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜನಪದ ಕಲೆಗಳು ನಶಿಸಬಾರದು ಮತ್ತು ಮುಂದಿನ ಪೀಳಿಗೆಗೆ ಕೊಂಡೊಯ್ಯಲು ವಿದ್ಯಾರ್ಥಿಗಳು ಮುಂದಾಗಬೇಕು ಎಂದು ತಿಳಿಸಿದರು.

ಲೊಯೋಲ ಕಾಲೇಜಿನ ಎಲ್ಲಾ ವಿಭಾಗಗಳ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಜನಪದ ಗೀತೆಗಳನ್ನು ಹಾಡಿ, ಗ್ರಾಮೀಣ ಭಾಗದ ಉಡುಗೆ ತೊಡುಗೆಗಳನ್ನು ಧರಿಸಿ ಜಾನಪದ ಹಾಡುಗ ಳಿಗೆ ಉತ್ಸಾಹದಿಂದ ನೃತ್ಯ ಪ್ರದರ್ಶನ ನೀಡಿ ಗಮನ ಸೆಳೆದರು ಕಾಲೇಜಿನ ಒಳಾಂಗಣದಲ್ಲಿ ಗ್ರಾಮೀಣ ಸೊಗಡನ್ನು ಪ್ರತಿಬಿಂಬಿ ಸುವ ಮಾದರಿಗಳನ್ನು ಪ್ರದರ್ಶಸಲಾಯಿತು. ಹಾಗೂ ಪ್ರತಿಕೃತಿಗಳ ನ್ನು ಸೃಷ್ಟಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಪದವಿಯ ಸೆಮಿಸ್ಟರ್ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ತೋರಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು ಹಾಗೂ ಕಾಲೇಜಿನ ಅಧಿಕೃತ ಮಾಧ್ಯಮ ತಂಡದವರ ಟೀ ಶರ್ಟಗಳನ್ನು ಅನಾವರಣಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಲೊಯೋಲ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಉಪನ್ಯಾಸಕರು, ಸಿಬ್ಬಂದಿಗಳು .ಗುರುಗಳು ಮತ್ತು ಕನ್ಯಾಸ್ತ್ರೀಯರು ಭಾಗವಹಿಸಿದ್ದರು.

## ಕ್ರೀಡಾ ಪ್ರಶಸ್ತಿ, ನಗದು ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಲು ಡಿ.10ರವರೆಗೆ ಅವಧಿ ವಿಸ್ತರಣೆ

**ರಾಯಚೂರು,ಡಿ.4–**ಇಲ್ಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2024ರ ಏಕಲವ್ಯ ಮತ್ತಿತರ ಕ್ರೀಡಾ ಪ್ರಶಸ್ತಿ ಹಾಗೂ ನಗದು ಪ್ರೋತ್ಸಾಹಧನಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ಡಿಸೆಂಬರ್ 10ರವರೆಗೆ ವಿಸ್ತರಿಸಲಾಗಿದೆ.

ಅರ್ಹ ಕ್ರೀಡಾಪಟುಗಳು ಪ್ರಶಸ್ತಿಗಳಾದ ಏಕಲವ್ಯ ಪ್ರಶಸ್ತಿ 2024, ಜೀವಮಾನ ಸಾಧನೆ ಪ್ರಶಸ್ತಿ 2024, ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ 2024, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ 2024, ಗುರಿ ಒಲಂಪಿಕ್ ಪದಕ 2025–26, ನಗದು ಪುರಸ್ಕಾರ 2023 ಮತ್ತು 2024 ಶೈಕ್ಷಣಿಕ ಶುಲ್ಕ ಮರು ಪಾವತಿ 2025–26, ಕ್ರೀಡಾ ವಿದ್ಯಾರ್ಥಿ ವೇತನ 2025–26ರ ಕ್ರೀಡೆಗಳಿಗೆ ವೆಬ್‌ಸೈಟ್ ವಿಳಾಸ: https://sevasindhuservices.karnataka.gov.in ರ ಮೂಲಕ ಅಂತಿಮ ದಿನಾಂಕದೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಹಾಗೂ ಜಿಲ್ಲಾ ಕ್ರೀಡಾಂಗಣ ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ರಾಯಚೂರು,ಡಿ.4–**ಕನ್ನಡ ಪುಸ್ತಕ ಪ್ರಾಧಿಕಾರದಿಂದ 2025–26 ನೇ ಸಾಲಿನ ಯುವ ಬರಹಗಾರರ ಚೊಚ್ಚಲ ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನ ನೀಡುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಯ್ಕೆಯಾದ 50 ಯುವ ಬರಹಗಾರರ ಹಸ್ತ ಪ್ರತಿಗಳ ಪ್ರಕಟಣೆಗೆ ಮಾತ್ರ ರೂ.15,000 ಗಳ ಪ್ರೋತ್ಸಾಹಧನ ನೀಡಲಾಗುವುದು. ಅರ್ಜಿದಾರರು 18 ರಿಂದ 40 ವರ್ಷ ವಯೋಮಿತಿಯವರಾಗಿರಬೇಕು. ಸ್ವ–ವಿವರವುಳ್ಳ ಪ್ರಾಧಿಕಾರದ ಅರ್ಜಿ ನಮೂನೆಯೊಂದಿಗೆ ದೃಢೀಕೃತ ಎಸ್.ಎಸ್.ಎಲ್.ಸಿ. ಪ್ರಮಾಣ ಪತ್ರದ ಪ್ರತಿ ಅಥವಾ ಅಧಿಕೃತವಾದ, ದೃಢೀಕರಿಸಲ್ಪಟ್ಟ ಜನ್ಮ ದಾಖಲಾತಿ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು. ಅಲ್ಲದೆ ಪ್ರಸ್ತುತ ಸಲ್ಲಿಸಲ್ಪಡುತ್ತಿರುವ ಕೃತಿಯು ತಮ್ಮ ಚೊಚ್ಚಲ ಕೃತಿಯಾಗಿದ್ದು, ಎಲ್ಲಿಯೂ ಪ್ರಕಟವಾಗಿಲ್ಲವೆಂದು ಸ್ವಯಂ ದೃಢೀಕರಣ ನೀಡಬೇಕು.

ಆಯ್ಕೆಗಾಗಿ ಸಲ್ಲಿಸುವ ಹಸ್ತ ಪ್ರತಿಯು ಡಿ.ಟಿ.ಪಿ. ಮಾಡಿಸಿದಾಗ 1/8 ಡೆಮ್ಮಿ ಅಳತೆಯಲ್ಲಿ ಕನಿಷ್ಟ 60 ಪುಟಗಳಿರಬೇಕು. ಅನುವಾದ, ಪಠ್ಯಪುಸ್ತಕ ಹಾಗೂ ಬೇರಾವುದೇ ಪದವಿ, ಸ್ನಾತಕೋತ್ತರ ಪದವಿ (ಪಿಎಚ್‌ಡಿ) ಗೆ ಸಿದ್ಧಪಡಿಸಿದ ಸಂಶೋಧನಾ ಪ್ರಬಂಧಗಳನ್ನು ಹೊರತುಪಡಿಸಿ, ಕಥೆ, ಕಾದಂಬರಿ, ಕವನ, ನಾಟಕ, ವಿಮರ್ಶಾ ಲೇಖನ, ಪ್ರಬಂಧ ಮುಂತಾದ ಕನ್ನಡ ಸಾಹಿತ್ಯ ಪ್ರಕಾರಗಳಿಗೆ ಸಂಬಂಧಿಸಿದಂತೆ ಹಸ್ತ ಪ್ರತಿ ಇರಬೇಕು. ಕೃತಿಯ ಪಠ್ಯದಲ್ಲಿ ಯಾವುದೇ ಧರ್ಮ, ದೇವರು, ಜಾತಿ, ಕೋಮು, ವೃತ್ತಿ, ಸಮುದಾಯ, ಭಾಷೆ, ಆಚರಣೆ, ಪದ್ಧತಿ, ಇತ್ಯಾದಿ ಸಂಗತಿಗಳಿಗೆ ಸಂಬಂಧಿಸಿದಂತೆ ಹಾಗೂ ರಾಷ್ಟ್ರೀಯ ನಾಯಕರುಗಳ ಕುರಿತಂತೆ ನೇರವಾಗಿಯೇ ಆಗಲಿ ಅಥವಾ ಪರೋಕ್ಷವಾಗಿಯೇ ಆಗಲಿ ಮನನೋಯಿಸುವಂತಹ ವಿಷಯವಾಗಲಿ ಇರಬಾರದು. ಅಲ್ಲದೆ ರಾಷ್ಟ್ರೀಯ ಭಾವೈಕ್ಯತೆಗೆ ಧಕ್ಕೆ ತರುವಂತಹ ವಿಷಯ, ಸಂಗತಿಗಳು ಪ್ರಸ್ತಾಪವಾಗಿರಬಾರದು. ಪ್ರಾಧಿಕಾರಕ್ಕೆ ಸಲ್ಲಿಸಲ್ಪಡುವ ಅರ್ಜಿಗಳೊಂದಿಗಿನ ಹಸ್ತ ಪ್ರತಿಗಳನ್ನು ಹಿಂದಿರುಗಿಸಲಾಗುವುದಿಲ್ಲ. ಆದ್ದರಿಂದ ತಮ್ಮ ಮೂಲ ಹಸ್ತ ಪ್ರತಿಯ ಒಂದು ಪ್ರತಿಯನ್ನು ತಮ್ಮ ಬಳಿಯೇ ಇಟ್ಟು ಕೊಳ್ಳುವುದು.

ಅರ್ಜಿಗಳೊಂದಿಗೆ ಡಿ.ಟಿ.ಪಿ. ಮಾಡಿದ ಹಸ್ತ ಪ್ರತಿಯನ್ನು ಹಸ್ತ ಪ್ರತಿಯನ್ನು ಡಿಸೆಂಬರ್ 24ರ ಸಂಜೆ 5.30 ಗಂಟೆಯೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡಭವನ, ಜೆ.ಸಿ.ರಸ್ತೆ, ಬೆಂಗಳೂರು–560002 ಅವರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕನ್ನಡ ಪುಸ್ತಕ ಪ್ರಾಧಿಕಾರದ ವೆಬ್‌ಸೈಟ್ ವಿಳಾಸ: www.kannadapustakapradhikara.comಅಥವಾ ದೂರವಾಣಿ ಸಂಖ್ಯೆ: 080–22484516, 22107704ಗೆ ಸಂಪರ್ಕಿಸಬಹುದು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅದ್ದೂರಿಯಾಗಿ ಕುಪ್ಪೀಭಿಮ ದೇವರ 100ನೇ ಮಹಾರಥೋತ್ಸವ

ಯುವಮಾರ್ಗ ಸುದ್ದಿ

**ಲಿಂಗಸುಗೂರು,ಡಿ.4– ಕಸಬಾಲಿಂಗಸುಗೂರು ಆರಾಧ್ಯ ದೈವ ಕುಪ್ಪೀಭೀಮ ದೇವರ 100ನೇ ರಥೋತ್ಸವ ಗುರುವಾರ ಸಂಜೆ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಸಂಭ್ರಮದಿಂದ ಜರುಗಿತು.ಕಳೆದ ನಾಲ್ಕು ದಿನಗಳಿಂದ ಪ್ರವಚನ, ಸಾಮೂಹಿಕ ವಿವಾಹ ಸೇರಿ ನಾನಾ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ದೇವಸ್ಥಾನದ ಆವರಣಲ್ಲಿ ಜರುಗುತ್ತಿದ್ದು ಗುರುವಾರ ಸಂಜೆ ಮಹಾರಥೋತ್ಸವ ವಿಜೃಂಭಣೆಯಿಂದ ನಡೆಯಿತು.**

**ಹೆಲಿಕಾಪ್ಟರ್ ಮೂಲಕ ಪುಷ್ಪಾರ್ಚನೆ : ರಥೋತ್ಸವದ ಶತಮಾನೋತ್ಸವದ ನಿಮಿತ್ಯ ಹೆಲಿಕಾಪ್ಟರ್ ಮೂಲಕ ಪುಷ್ಪಾರ್ಚನೆ ಮಾಡಲಾಯಿತು. ಸುತ್ತಮುತ್ತಲಿನ ಗ್ರಾಮಸ್ಥರೂ ಸೇರಿ, ನೆರೆಯ ತಾಲೂಕು, ಜಿಲ್ಲೆಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಭಕ್ತ ಸಮೂಹ ಮಹಾರಥೋತ್ಸವಕ್ಕೆ ಸಾಕ್ಷಿಯಾಯಿತು.ಈ ಸಂದರ್ಭದಲ್ಲಿ ಶಾಸಕ ಮಾನಪ್ಪ ವಜ್ಜಲ್, ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ, ಮಾಜಿ ಸಚಿವ ಅಮರೇಗೌಡ ಪಾಟೀಲ್ ಬಯ್ಯಾಪೂರ, ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ, ತಹಸೀಲ್ದಾರ್ ಸತ್ಯಮ್ಮ ಸೇರಿ ವಿವಿಧ ರಾಜಕೀಯ ಪಕ್ಷದ ಮುಖಂಡರುಗಳು, ಹಿರಿಯರು, ಅಧಿಕಾರಿಗಳು, ಸಾರ್ವಜನಿಕರು ಜಾತ್ರೆಯಲ್ಲಿ ಪಾಲ್ಗೊಂಡು ಕುಪ್ಪೆಭೀಮ ದೇವರ ಕೃಪೆಗೆ ಪಾತ್ರರಾದರು.**





# ಜೆಸ್ಕಾಂನಿಂದ ಇಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಡಿ.4–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆಯ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿಯ ಚಂದ್ರಬಂಡ ಮತ್ತು ಜವಾಹರನಗರದ ವಿದ್ಯುತ್ ಉಪ–ಕೇಂದ್ರಗಳಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 05ರ ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮ್ತು ಪಾಲನೆ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H**